

# ಯೇಸುಕ್ರಿಸ್ತನ ಅದ್ಭುತಕರವಾದ ಜೀವಿತ

# ನಮ್ಮ ಕುರುಬನು ಯಾರು?

ಯೇಸುಕ್ರಿಸ್ತನು ಕೆಲವು ವರ್ಷಗಳ ಹಿಂದೆ ಜೀವಿಸಿ ಸತ್ತ ಅದ್ಭುತ ವ್ಯಕ್ತಿ ಮಾತ್ರವಲ್ಲ. ಸತ್ಯವೇದದ ಪ್ರಕಾರ, ಆತನು ಮನುಷ್ಯನಾಗಿ ಭೂಮಿಯಲ್ಲಿ ಜೀವಿಸಿದ ಸೃಷ್ಟಿಕರ್ತನಾದ ದೇವರಾಗಿದ್ದಾನೆ. ಅದರ ಮೂಲಕ ಪಾಪದ, ಸೈತಾನನ ಮತ್ತು ಮರಣದ ಬಲದಲ್ಲಿ ಸಿಕ್ಕಿಕೊಂಡಿದ್ದ ಪಾಪಿಗಳಾದ ಮಾನವರನ್ನು ತನ್ನ ರಕ್ತದ ಮೂಲಕವಾಗಿ ಬಿಡಿಸಲು ಬಂದನು. ಇಂದು ಆತನು ಜೀವಂತನಾಗಿದ್ದು ತನ್ನ ಬಳಿಗೆ ಬರುವವರಿಗೆ ನಿತ್ಯ ಜೀವವನ್ನು ಕೊಡುತ್ತಾನೆ.

ಯೇಸುಕ್ರಿಸ್ತನನ್ನು ಸ್ವೀಕರಿಸುವದು ಅಥವಾ ತಿರಸ್ಕರಿಸುವದು ಜೀವ ಅಥವಾ ಮರಣದ ಸಂಗತಿಯಾಗಿದೆ. "ಯಾವನು ದೇವರ ಮಗನನ್ನು ಅಂಗೀಕರಿಸಿದ್ದಾನೋ ಅವನಿಗೆ ಆ ಜೀವ ಉಂಟು; ಯಾವನು ದೇವರ ಮಗನನ್ನು ಅಂಗೀಕರಿಸಲಿಲ್ಲವೋ ಅವನಿಗೆ ಆ ಜೀವವಿಲ್ಲ" (1ಯೋಹಾನ 5:12) "ಬರಬೇಕಾದ ರಕ್ಷಣೆಯು ಇನ್ನಾರಲ್ಲಿಯೂ ಸಿಕ್ಕುವದಿಲ್ಲ; ಆ ಹೆಸರಿನಿಂದಲೇ ಹೊರತು ಆಕಾಶದ ಕೆಳಗೆ ಮನುಷ್ಯರೊಳಗೆ ಕೊಡಲ್ಪಟ್ಟಿರುವ ಯಾವ ಹೆಸರಿನಿಂದಲೂ ನಮಗೆ ರಕ್ಷಣೆಯಾಗುವದಿಲ್ಲ" (ಅಪೊ 4:12).

ಯೇಸುಕ್ರಿಸ್ತನ ಅದ್ಭುತಕರವಾದ ಜೀವಿತದ ಕುರಿತು ನೀವು ಕಲಿಯುವದರ ಮೂಲಕ ದೇವರು ನಿಜವಾಗಿಯೂ ನಿಮ್ಮಲ್ಲಿ ಕಾರ್ಯಮಾಡಲಿ. "ಒಬ್ಬನೇ ಸತ್ಯದೇವರಾಗಿರುವ ನಿನ್ನನ್ನೂ ನೀನು ಕಳುಹಿಸಿಕೊಟ್ಟ ಯೇಸುಕ್ರಿಸ್ತನನ್ನೂ ತಿಳಿಯುವದೇ ನಿತ್ಯಜೀವವು" (ಯೋಹಾನ 17:3). ಯೇಸುವನ್ನು ನಿಮ್ಮ ರಕ್ಷಕನಾಗಿಯೂ ಕರ್ತನಾಗಿಯೂ ನಿಮ್ಮ ಹೃದಯದಲ್ಲಿ ಸ್ವೀಕರಿಸಿದ್ದೀರೋ? ಇಲ್ಲದಿದ್ದರೆ, ಇಂದೇ ಅದನ್ನು ಮಾಡಿರಿ.

---

All scriptures are taken from the Kannada Bible with permission from the Bible Society of India.

# ಯೇಸು ತನ್ನ ಜನನಕ್ಕಿಂತ ಮುಂಚೆ ಅಸ್ತಿತ್ವದಲ್ಲಿದ್ದನು 

ಆದಿಯಲ್ಲಿ ವಾಕ್ಯವಿತ್ತು ; ಆ ವಾಕ್ಯವು ದೇವರ ಬಳಿಯಲ್ಲಿತ್ತು; ಆ ವಾಕ್ಯವು ದೇವರಾಗಿತ್ತು. ಆ ವಾಕ್ಯವೆಂಬವನು ಆದಿಯಲ್ಲಿ ದೇವರ ಬಳಿಯಲ್ಲಿದ್ದನು. ಆತನ ಮೂಲಕವಾಗಿ ಸಮಸ್ತವು ಉಂಟಾಯಿತು; ಉಂಟಾಗಿರುವ ವಸ್ತುಗಳಲ್ಲಿ ಆತನಿಲ್ಲದೆ ಒಂದಾದರೂ ಉಂಟಾಗಲಿಲ್ಲ. ಆ ವಾಕ್ಯವೆಂಬವನು ನರಾವತಾರ ಎತ್ತಿ ನಮ್ಮ ಮಧ್ಯದಲ್ಲಿ ವಾಸಮಾಡಿದನು. ನಾವು ಆತನ ಮಹಿಮೆಯನ್ನು ನೋಡಿದೆವು.

–ಯೋಹಾನ 1:1–3,14a

ಭೂಪರಲೋಕಗಳಲ್ಲಿರುವ ದೃಶ್ಯಾದೃಶ್ಯ ವಾದವುಗಳೆಲ್ಲವೂ ಆತನಲ್ಲಿ ಸೃಷ್ಟಿಸಲ್ಪಟ್ಟವು. ಸರ್ವವು ಆತನ ಮುಖಾಂತರವಾಗಿಯೂ ಆತನಿಗೋಸ್ಕರ ವಾಗಿಯೂ ಸೃಷ್ಟಿಸಲ್ಪಟ್ಟಿತು. ಆತನು ಎಲ್ಲಕ್ಕೂ ಮೊದಲು ಇದ್ದವನು...

–ಕೊಲೊಸ್ಸೆ 1:16–17

ಪುರಾತನ ಕಾಲದಲ್ಲಿ ನಮ್ಮ ಪಿತೃಗಳ ಸಂಗಡ ಪ್ರವಾದಿಗಳ ಬಾಯಿಂದ ಭಾಗಭಾಗವಾಗಿಯೂ ವಿಧವಿಧವಾಗಿಯೂ ಮಾತಾಡಿದ ದೇವರು ಈ ಅಂತ್ಯ ದಿನಗಳಲ್ಲಿ ನಮ್ಮ ಸಂಗಡ ಮಗನ ಮುಖಾಂತರ ಮಾತಾಡಿದ್ದಾನೆ. ಈತನನ್ನು ಎಲ್ಲಕ್ಕೂ ಬಾಧ್ಯನನ್ನಾಗಿ ನೇಮಿಸಿದನು, ಈತನ ಮೂಲಕವೇ ಜಗತ್ತನ್ನು ಉಂಟು ಮಾಡಿದನು.

–ಇಬ್ರಿಯ 1:1–2

ಯೇಸು–"ನಿಮಗೆ ನಿಜನಿಜವಾಗಿ ಹೇಳುತ್ತೇನೆ, ಅಬ್ರಹಾಮನು ಹುಟ್ಟುವದಕ್ಕಿಂತ ಮುಂಚಿನಿಂದಲೂ ನಾನು ಇದ್ದೇನೆ" ಅಂದನು.

–ಯೋಹಾನ 8:58

ಮಗನ ವಿಷಯದಲ್ಲಿಯಾದರೋ–"ದೇವರೇ, ನಿನ್ನ ಸಿಂಹಾಸನವು ಯುಗಯುಗಾಂತರಗಳಲ್ಲಿಯೂ ಇರುವದು". "ಕರ್ತನೇ, ಆದಿಯಲ್ಲಿ ನೀನು ಭೂಮಿಗೆ ಅಸ್ತಿವಾರವನ್ನು ಹಾಕಿದಿ, ಗಗನಮಂಡಲವು ನಿನ್ನ ಕೈಕೆಲಸವಾಗಿದೆ".

–ಇಬ್ರಿಯ 1:8a,10

# ಯೇಸುವಿನ ಜೀವಿತದ ಕುರಿತು ಪ್ರವಾದಿಗಳು ಮುಂತಿಳಿಸಿದ್ದರು

"ಇದರಿಂದ ಕರ್ತನು ತಾನೇ ನಿಮಗೆ ಒಂದು ಗುರುತನ್ನು ಕೊಡುವನು. ಇಗೋ, ಒಬ್ಬ ಕನ್ಯಕೆಯು ಗರ್ಭಿಣಿಯಾಗಿ ಮಗನನ್ನು ಹಡೆದು ಅವನಿಗೆ ಇಮ್ಮಾನುವೇಲ್ ಎಂದು ಹೆಸರಿಡುವಳು".

–ಯೆಶಾಯ 7:14

"ಎಫ್ರಾತದ ಬೇತ್ಲೆಹೇಮೇ, ನೀನು ಯೆಹೂದದ ಗ್ರಾಮಗಳಲ್ಲಿ ಚಿಕ್ಕದಾಗಿದ್ದರೂ ಇಸ್ರಾಯೇಲನ್ನು ಆಳತಕ್ಕವನು ನಿನ್ನೊಳಗಿಂದ ನನಗಾಗಿ ಹೊರಡುವನು; ಆತನ ಹೊರಡೋಣದ ಮೂಲವು ಪುರಾತನವೂ ಅನಾದಿಯೂ ಆದದ್ದು". –ಮೀಕ 5:2

ಒಂದು ಮಗು ನಮಗಾಗಿ ಹುಟ್ಟಿದೆಯಷ್ಟೆ, ವರದ ಮಗನು ನಮಗೆ ದೊರೆತನು; ಆಡಳಿತವು ಅವನ ಬಾಹುವಿನ ಮೇಲಿರುವದು; ಅದ್ಭುತಸ್ವರೂಪನು, ಆಲೋಚನಾಕರ್ತನು, ಪರಾಕ್ರಮಿಯಾದ ದೇವರು, ನಿತ್ಯನಾದ ತಂದೆ, ಸಮಾಧಾನದ ಪ್ರಭು ಎಂಬವು ಅವನ ಹೆಸರು. ಅವನ ಮುಖಾಂತರ ದಾವೀದನ ಸಿಂಹಾಸನದ ಆಡಳಿತವು ಅಭಿವೃದ್ಧಿಯಾಗುವದು, ದಾವೀದನ ರಾಜ್ಯದಲ್ಲಿ ನಿತ್ಯ ಸಮಾಧಾನವಿರುವದು.

–ಯೆಶಾಯ 9:6–7a

ಅವನು ಧಿಕ್ಕರಿಸಲ್ಪಟ್ಟವನು ಮನುಷ್ಯರು ಸೇರಿಸಿಕೊಳ್ಳದವನು, ಸಂಕಷ್ಟಕ್ಕೊಳಗಾದವನು, ವ್ಯಾಧಿಪೀಡಿತನು, ನಿಜವಾಗಿಯೂ ನಮ್ಮ ಸಂಕಷ್ಟಗಳನ್ನು ಅನುಭವಿಸಿದನು; ಅವನು ಹೊತ್ತ ಹೊರೆಯು ನಮ್ಮ ಸಂಕಟವೇ ಹೌದು; ನಾವಾದರೋ ಅವನು ದೇವರಿಂದ ಬಾಧಿತನು, ಪೆಟ್ಟು ತಿಂದವನು, ಕುಗ್ಗಿಸಲ್ಪಟ್ಟವನು ಎಂದು ಭಾವಿಸಿಕೊಂಡೆವು. ನಮ್ಮ ದ್ರೋಹಗಳ ದೆಸೆಯಿಂದ ಅವನಿಗೆ ಗಾಯವಾಯಿತು. ನಮ್ಮ ಅಪರಾಧಗಳ ನಿಮಿತ್ತ ಅವನು ಜಜ್ಜಲ್ಪಟ್ಟನು.

–ಯೆಶಾಯ 53:3a, 4–5a

ಕ್ರಿಸ್ತಯೇಸು.... ದೇವಸ್ವರೂಪನಾಗಿದ್ದರೂ ದೇವರಿಗೆ ಸರಿಸಮಾನನಾಗಿರುವದೆಂಬ ಅಮೂಲ್ಯ ಪದವಿಯನ್ನು ಬಿಡಲೊಲ್ಲೆನು ಎಂದೆಣಿಸದೆ ತನ್ನನ್ನು ಬರಿದು ಮಾಡಿಕೊಂಡು ದಾಸನ ರೂಪವನ್ನು ಧರಿಸಿಕೊಂಡು ಮನುಷ್ಯರಿಗೆ ಸದೃಶ್ಯನಾದನು. ಹೀಗೆ ಆತನು ಆಕಾರದಲ್ಲಿ ಮನುಷ್ಯನಾಗಿ ಕಾಣಿಸಿಕೊಂಡಿದ್ದಾಗ ತನ್ನನ್ನು ತಗ್ಗಿಸಿಕೊಂಡು ಮರಣವನ್ನು ಅಂದರೆ ಶಿಲುಬೆಯ ಮರಣವನ್ನಾದರೂ ಹೊಂದುವಷ್ಟು ವಿಧೇಯನಾದನು. –ಫಿಲಿಪ್ಪಿ 2:5–8

ಯೇಸು ಅವರಿಗೆ "... ನಾನು ದೇವರಿಂದಲೇ ಹೊರಟು ಲೋಕಕ್ಕೆ ಬಂದವನಾಗಿದ್ದೇನೆ..."

–ಯೋಹಾನ 8:42

ಮೊದಲನೆಯ ಮನುಷ್ಯನು (ಆದಾಮನು) ಭೂಮಿಯೊಳಗಿಂದ ಉತ್ಪನ್ನನಾಗಿ ಮಣ್ಣಿಗೆ ಸಂಬಂಧಪಟ್ಟವನು; ಎರಡನೆಯ ಮನುಷ್ಯನು (ಯೇಸು) ಪರಲೋಕದಿಂದ ಬಂದವನು. –1ಕೊರಿಂಥ 15:47

ಆದದರಿಂದ ಕ್ರಿಸ್ತನು ಭೂಲೋಕದೊಳಗೆ ಬರುವಾಗ–"(ದೇವರೇ) ಯಜ್ಞನೈವೇದ್ಯಗಳು ನಿನಗೆ ಇಷ್ಟವಾಗಿರಲಿಲ್ಲ, ನನಗೆ ದೇಹವನ್ನು ಸಿದ್ಧಮಾಡಿಕೊಟ್ಟೆ". –ಇಬ್ರಿಯ 10:5

ಇದಲ್ಲದೆ ಮಕ್ಕಳು ರಕ್ತಮಾಂಸಧಾರಿಗಳಾಗಿರುವದರಿಂದ ಆತನೂ ಅವರಂತೆಯೇ ಆದನು. ತನ್ನ ಮರಣದಿಂದಲೇ ಮರಣಾಧಿಕಾರಿಯನ್ನು ಅಂದರೆ ಸೈತಾನನನ್ನು ಅಡಗಿಸಿಬಿಡುವದಕ್ಕೂ, ಮರಣಭಯದ ದೆಸೆಯಿಂದ ತಮ್ಮ ಜೀವಮಾನದಲ್ಲೆಲ್ಲಾ ದಾಸತ್ವದೊಳಗಿದ್ದವರನ್ನು ಬಿಡಿಸುವದಕ್ಕೂ ಅವರಂತೆ ರಕ್ತಮಾಂಸಧಾರಿಯಾದನು. –ಇಬ್ರಿಯ 2:14–15

# ಯೇಸು ಭೂಮಿಗೆ ಬಂದದ್ದರ ಉದ್ದೇಶ

"ಮನುಷ್ಯಕುಮಾರನು ಸಹ ಸೇವೆಮಾಡಿಸಿಕೊಳ್ಳುವದಕ್ಕೆ ಬರಲಿಲ್ಲ, ಸೇವೆ ಮಾಡುವದಕ್ಕೂ ಅನೇಕರನ್ನು ಬಿಡಿಸಿಕೊಳ್ಳುವದಕ್ಕಾಗಿ ತನ್ನ ಪ್ರಾಣವನ್ನು ಈಡು ಕೊಡುವದಕ್ಕೂ ಬಂದನು ಎಂದು ಹೇಳಿದನು".
–ಮಾರ್ಕ 10:45

"ಮನುಷ್ಯ ಕುಮಾರನು ಕೆಟ್ಟು ಹೋಗಿರುವದನ್ನು ಹುಡುಕಿ ರಕ್ಷಿಸುವದಕ್ಕೆ ಬಂದನು ಎಂದು ಹೇಳಿದನು".
–ಲೂಕ 19:10

"ದೇವರು ತನ್ನ ಮಗನ ಮುಖಾಂತರ ಲೋಕಕ್ಕೆ ರಕ್ಷಣೆಯಾಗಬೇಕೆಂದು ಆತನನ್ನು ಕಳುಹಿಸಿಕೊಟ್ಟನೇ ಹೊರತು ತೀರ್ಪುಮಾಡುವದಕ್ಕಾಗಿ ಕಳುಹಿಸಲಿಲ್ಲ".
–ಯೋಹಾನ 3:17

ಯೇಸು ಅವನಿಗೆ – "... ನಾನು ಸತ್ಯದ ವಿಷಯದಲ್ಲಿ ಸಾಕ್ಷಿ ಹೇಳುವದಕ್ಕೋಸ್ಕರ ಹುಟ್ಟಿದವನು, ಅದಕ್ಕೋಸ್ಕರವೇ ಈ ಲೋಕಕ್ಕೆ ಬಂದಿದ್ದೇನೆ. ಸತ್ಯಪರರೆಲ್ಲರು ನನ್ನ ಮಾತಿಗೆ ಕಿವಿಗೊಡುತ್ತಾರೆ" ಎಂದು ಉತ್ತರ ಕೊಟ್ಟನು. –ಯೋಹಾನ 18:37b

ಕ್ರಿಸ್ತಯೇಸು ಪಾಪಿಗಳನ್ನು ರಕ್ಷಿಸುವದಕ್ಕೋಸ್ಕರ ಈ ಲೋಕಕ್ಕೆ ಬಂದನು... –1 ತಿಮೊಥೆ 1:15a

ದೇವರು ತನ್ನ ಒಬ್ಬನೇ ಮಗನನ್ನು ನಾವು ಆತನ ಮೂಲಕ ಜೀವಿಸುವದಕ್ಕಾಗಿ ಲೋಕಕ್ಕೆ ಕಳುಹಿಸಿಕೊಟ್ಟದ್ದರಲ್ಲಿಯೇ... –1 ಯೋಹಾನ 4:9a

ಆದರೆ ಕಾಲವು ಪರಿಪೂರ್ಣವಾದಾಗ ದೇವರು ತನ್ನ ಮಗನನ್ನು ಕಳುಹಿಸಿಕೊಟ್ಟನು. ಧರ್ಮ ಶಾಸ್ತ್ರಾಧೀನರಾದವರನ್ನು ವಿಮೋಚಿಸಬೇಕೆಂತಲೂ ಪುತ್ರರ ಪದವಿಯನ್ನು ನಮಗೆ ದೊರಕಿಸಬೇಕೆಂತಲೂ ಆತನು ಸ್ತ್ರೀಯಲ್ಲಿ ಹುಟ್ಟಿದವನಾಗಿಯೂ ಧರ್ಮಶಾಸ್ತ್ರಾಧೀನನಾಗಿಯೂ ಬಂದನು. –ಗಲಾತ್ಯ 4:4–5

# ಯೇಸು ಅದ್ಭುತಕರವಾಗಿ ಗರ್ಭಧರಿಸಲ್ಪಟ್ಟನು

ದೇವರು ಗಬ್ರಿಯೇಲನೆಂಬ ತನ್ನ ದೂತನನ್ನು ಗಲಿಲಾಯ ಸೀಮೆಯ ನಜರೇತೆಂಬ ಊರಿಗೆ ಒಬ್ಬ ಕನ್ಯೆಯ ಬಳಿಗೆ ಕಳುಹಿಸಿದನು; ಆ ಕನ್ಯೆಯ ಹೆಸರು ಮರಿಯಳು; ಆಕೆಯು ದಾವೀದನ ಮನೆತನದ ಯೋಸೇಫನೆಂಬ ಪುರುಷನಿಗೆ ನಿಶ್ಚಿತಾರ್ಥವಾಗಿದ್ದಳು... ಆ ದೂತನು ಆಕೆಗೆ–"ಮರಿಯಳೇ, ಹೆದರಬೇಡ; ನಿನಗೆ ದೇವರ ದಯೆ ದೊರಕಿತು. ಇಗೋ, ನೀನು ಗರ್ಭಿಣಿಯಾಗಿ ಒಬ್ಬ ಮಗನನ್ನು ಹೆರುವಿ; ಆತನಿಗೆ ಯೇಸುವೆಂದು ಹೆಸರಿಡಬೇಕು. ಆತನು ಮಹಾಪುರುಷನಾಗಿ ಪರಾತ್ಪರನ ಕುಮಾರನೆನಿಸಿಕೊಳ್ಳುವನು... ಆತನ ರಾಜ್ಯಕ್ಕೆ ಅಂತ್ಯವೇ ಇಲ್ಲ" ಎಂದು ಹೇಳಿದನು. ಮರಿಯಳು ಆ ದೂತನನ್ನು – "ಇದು ಹೇಗಾದೀತು? ನಾನು ಪುರುಷನನ್ನು ಅರಿತವಳಲ್ಲವಲ್ಲಾ" ಎಂದು ಕೇಳಿದ್ದಕ್ಕೆ ದೂತನು – "ನಿನ್ನ ಮೇಲೆ ಪವಿತ್ರಾತ್ಮ ಬರುವದು; ಪರಾತ್ಪರನ ಶಕ್ತಿಯ ನೆರಳು ನಿನ್ನ ಮೇಲೆ ಬೀಳುವದು; ಆದದರಿಂದ ಹುಟ್ಟುವ ಆ ಪವಿತ್ರ ಶಿಶು ದೇವರ ಮಗನೆನಿಸಿಕೊಳ್ಳುವದು... ದೇವರಿಂದ ಬರುವ ಯಾವ ಮಾತಾದರೂ ನಿಷ್ಫಲವಾಗುವದಿಲ್ಲ" ಅಂದನು.

–ಲೂಕ 1:26b–27, 30–37.

"ಎಲೈ ಯೋಸೇಫನೆ, ದಾವೀದನ ವಂಶದವನೇ, ನಿನ್ನ ಹೆಂಡತಿಯಾದ ಮರಿಯಳನ್ನು ಸೇರಿಸಿಕೊಳ್ಳುವದಕ್ಕೆ ಅಂಜಬೇಡ. ಆಕೆಯ ಗರ್ಭವು ಪವಿತ್ರಾತ್ಮದಿಂದಲೇ ಆದದ್ದು. ಆಕೆಯು ಒಬ್ಬ ಮಗನನ್ನು ಹಡೆಯುವಳು; ನೀನು ಆತನಿಗೆ ಯೇಸು ಎಂದು ಹೆಸರಿಡಬೇಕು; ಯಾಕೆಂದರೆ ಆತನೇ ತನ್ನ ಜನರನ್ನು ಅವರ ಪಾಪಗಳಿಂದ ಬಿಡಿಸಿ ಕಾಯುವನು" ಅಂದನು.

–ಮತ್ತಾಯ 1:20b–21.

# ಯೇಸುವಿನ ಜನನ

ಆ ಕಾಲದಲ್ಲಿ ರಾಜ್ಯವೆಲ್ಲಾ ಖಾನೇಷುಮಾರಿ ಬರಸಿಕೊಳ್ಳಬೇಕೆಂಬ ಆಜ್ಞೆಯು ಚಕ್ರವರ್ತಿಯಾದ ಔಗುಸ್ತನಿಂದ ಹೊರಟಿತು... ಎಲ್ಲರೂ ಖಾನೇಷು ಮಾರಿ ಬರಸಿಕೊಳ್ಳುವದಕ್ಕಾಗಿ ತಮ್ಮ ತಮ್ಮ ಊರು ಗಳಿಗೆ ಹೊರಟರು. ಯೋಸೇಫನು ಸಹ ಹೆಸರು ಬರಸಿಕೊಳ್ಳುವದಕ್ಕಾಗಿ ತನಗೆ ನಿಶ್ಚಿತಾರ್ಥವಾಗಿದ್ದ ಮರಿಯಳ ಸಂಗಡ ಬೇತ್ಲೆಹೇಮೆಂಬ ದಾವೀದನೂ ರಿಗೆ ಹೋದನು. ಆಗ ಮರಿಯಳು ಪೂರ್ಣ ಗರ್ಭಿಣಿ ಯಾಗಿದ್ದಳು... ಆಕೆಯು ತನ್ನ ಚೊಚ್ಚಲ ಮಗನನ್ನು ಹೆತ್ತು ಬಟ್ಟೆಯಲ್ಲಿ ಸುತ್ತಿ ಛತ್ರದಲ್ಲಿ ಅವರಿಗೆ ಸ್ಥಳವಿಲ್ಲದ ಕಾರಣ ಅವನನ್ನು ಗೋದಲಿಯಲ್ಲಿ ಮಲಗಿಸಿದಳು.

ಆ ಸೀಮೆಯಲ್ಲಿ ಕುರುಬರು ಹೊಲದಲ್ಲಿದ್ದು ಕೊಂಡು ರಾತ್ರಿಯಲ್ಲಿ ತಮ್ಮ ಕುರೀಹಿಂಡನ್ನು ಕಾಯುತ್ತಿರಲಾಗಿ ಕರ್ತನ ದೂತನೊಬ್ಬನು ಬಂದು ಅವರ ಎದುರಿನಲ್ಲಿ ನಿಂತನು. ಕರ್ತನ ಪ್ರಭೆಯು ಅವರ ಸುತ್ತಲು ಪ್ರಕಾಶಿಸಿತು; ಅವರು ಬಹಳವಾಗಿ ಹೆದರಿದರು. ಆ ದೂತನು ಅವರಿಗೆ – "ಹೆದರ ಬೇಡಿರಿ, ಕೇಳಿರಿ; ಜನರಿಗೆಲ್ಲಾ ಮಹಾ ಸಂತೋಷ ವನ್ನುಂಟುಮಾಡುವ ಶುಭಸಮಾಚಾರವನ್ನು ನಿಮಗೆ ತಿಳಿಸುತ್ತೇನೆ. ಅದೇನೆಂದರೆ ಈ ಹೊತ್ತು ನಿಮು ಗೋಸ್ಕರ ದಾವೀದನೂರಲ್ಲಿ ಒಬ್ಬ ರಕ್ಷಕನು ಹುಟ್ಟಿ ದ್ದಾನೆ. ಆತನು ಕರ್ತನಾಗಿರುವ ಕ್ರಿಸ್ತನೇ... ಬಟ್ಟೆಯಿಂದ ಸುತ್ತಿರುವ ಒಂದು ಕೂಸು ಗೋದಲಿಯಲ್ಲಿ ಮಲಗಿರುವದನ್ನು ಕಾಣುವಿರಿ" ಎಂದು ಹೇಳಿದನು. ಪಕ್ಕನೆ ಆ ದೂತನ ಸಂಗಡ ಪರಲೋಕ ಸೈನ್ಯದವರ ಒಂದು ದೊಡ್ಡ ಗುಂಪು ಕಾಣಿಸಿಕೊಂಡು – "ಮೇಲಣ ಲೋಕಗಳಲ್ಲಿ ದೇವರಿಗೆ ಮಹಿಮೆ, ಭೂ ಲೋಕದಲ್ಲಿ ಮನುಷ್ಯರೊಳಗೆ ಸಮಾಧಾನ, ದೇವರು ಅವರಿಗೆ ಒಲಿಯುತ್ತಾನೆ" ಎಂದು ದೇವರನ್ನು ಕೊಂಡಾಡುತ್ತಾ ಹೇಳಿದರು.

–ಲೂಕ 2:1–14

# ಯೇಸು ಕೂಸಾಗಿದ್ದಾಗ

ಆ ಕೂಸಿಗೆ ಸುನ್ನತಿ ಮಾಡುವದಕ್ಕೆ ಕಳೆಯ ಬೇಕಾದ ಎಂಟು ದಿವಸಗಳು ತುಂಬಿದ ಮೇಲೆ ಅದಕ್ಕೆ ಯೇಸುವೆಂದು ಹೆಸರಿಟ್ಟರು. ಅದು ಗರ್ಭದಲ್ಲಿ ಮೂಡುವದಕ್ಕಿಂತ ಮೊದಲು ದೇವದೂತನು ಅದೇ ಹೆಸರನ್ನು ಸೂಚಿಸಿದ್ದನು. –ಲೂಕ 2:21

ಆ ಕಾಲದಲ್ಲಿ ಯೆರೂಸಲೇಮಿನಲ್ಲಿ ಸಿಮೆಯೋನ ನೆಂಬ ಒಬ್ಬ ಮನುಷ್ಯನಿದ್ದನು. ಈ ಮನುಷ್ಯನು ನೀತಿವಂತನೂ ದೇವಭಕ್ತನೂ ಆಗಿದ್ದು ಇಸ್ರಾಯೇಲ್ ಜನರನ್ನು ಸಂತೈಸುವವನು ಯಾವಾಗ ಬಂದಾನೆಂದು ಹಾರೈಸುತ್ತಿದ್ದನು; ಮತ್ತು ಪವಿತ್ರಾತ್ಮ ಪ್ರೇರಿತನಾಗಿದ್ದನು. ಇದಲ್ಲದೆ, ಕರ್ತನು ಕಳುಹಿಸಬೇಕಾದ ಕ್ರಿಸ್ತನನ್ನು ಕಾಣುವದಕ್ಕಿಂತ ಮುಂಚೆ ನೀನು ಸಾಯುವದಿಲ್ಲವೆಂದು ಪವಿತ್ರಾತ್ಮನ ಮೂಲಕ ಅವನಿಗೆ ದೈವೋಕ್ತಿ ಉಂಟಾಗಿತ್ತು. ಇವನು ಪವಿತ್ರಾತ್ಮನ ಪ್ರೇರಣೆ ಯಿಂದ ದೇವಾಲಯಕ್ಕೆ ಬಂದನು; ಆಗ ತಂದೆತಾಯಿಗಳು ಯೇಸುವೆಂಬ ಮಗುವಿಗೆ ಧರ್ಮಶಾಸ್ತ್ರದಲ್ಲಿ ಹೇಳಿರುವ ಪದ್ಧತಿಯ ಪ್ರಕಾರ ನಡಿಸಬೇಕೆಂದು ಅದನ್ನು ಒಳಕ್ಕೆ ತರಲು ಅವನು ಅದನ್ನು ತನ್ನ ಕೈಯಲ್ಲಿ ತಕ್ಕೊಂಡು ದೇವರನ್ನು ಕೊಂಡಾಡಿ – “ಒಡೆಯನೇ, ನಿನ್ನ ಮಾತು ನೆರವೇರಿತು; ಈಗ ಸಮಾಧಾನದಿಂದ ಹೋಗುವದಕ್ಕೆ ನಿನ್ನ ದಾಸನಿಗೆ ಅಪ್ಪಣೆಯಾಯಿತು. ನೀನು ನೇಮಿಸಿರುವ ರಕ್ಷಕನನ್ನು ನಾನು ಕಣ್ಣಾರೆ ಕಂಡೆನು. ಎಲ್ಲಾ ಜನಗಳಿಗೆ ಪ್ರತ್ಯಕ್ಷನಾಗಲಿ ಎಂದು ಆತನನ್ನು ಒದಗಿಸಿಕೊಟ್ಟಿದ್ದೀ. ಆತನು ಅನ್ಯದೇಶದವರಿಗೆ ಜ್ಞಾನೋದಯದ ಬೆಳಕು, ನಿನ್ನ ಪ್ರಜೆಯಾದ ಇಸ್ರಾಯೇಲ್ಯರಿಗೆ ಕೀರ್ತಿ, ಅಂದನು. ಆ ಮಗುವಿನ ವಿಷಯವಾಗಿ ಹೇಳಿದ ಈ ಮಾತುಗಳಿಗೆ ಅದರ ತಂದೆತಾಯಿಗಳು ಆಶ್ಚರ್ಯ ಪಡುತ್ತಿರಲು ಸಿಮೆಯೋನನು ಅವರನ್ನು ಆಶೀರ್ವದಿಸಿ...

–ಲೂಕ 2:25–34

# ಯೇಸು ಆರಾಧಿಸಲ್ಪಟ್ಟನು

ಅರಸನಾದ ಹೆರೋದನ ದಿನಗಳಲ್ಲಿ ಯೂದಾಯ ಸೀಮೆಯ ಬೇತ್ಲೆಹೇಮ್ ಎಂಬ ಊರಲ್ಲಿ ಯೇಸು ಹುಟ್ಟಿದಾಗ ಮೂಡಣ ದೇಶದ ಜೋಯಿಸರು ಯೆರೂಸಲೇಮಿಗೆ ಬಂದು – "ಯೆಹೂದ್ಯರ ಅರಸನಾಗಿ ಹುಟ್ಟಿದವನು ಎಲ್ಲಿದ್ದಾನೆ? ಆತನನ್ನು ಸೂಚಿಸುವ ನಕ್ಷತ್ರವನ್ನು ನಾವು ಮೂಡಣದೇಶದಲ್ಲಿ ಕಂಡು ಆತನಿಗೆ ಅಡ್ಡಬೀಳುವದಕ್ಕೆ ಬಂದೆವು" ಅಂದರು.

ಇದನ್ನು ಕೇಳಿ ಅರಸನಾದ ಹೆರೋದನೂ ಅವನ ಕೂಡ ಯೆರೂಸಲೇಮಿನವರೆಲ್ಲರೂ ಕಳವಳಪಟ್ಟರು. ಅವನು ಯೆಹೂದ್ಯರ ಎಲ್ಲಾ ಮಹಾಯಾಜಕರನ್ನೂ ಶಾಸ್ತ್ರಿಗಳನ್ನೂ ಕೂಡಿಸಿ ಕ್ರಿಸ್ತನು ಹುಟ್ಟಬೇಕಾದದ್ದು ಎಲ್ಲಿ ಎಂದು ಅವರನ್ನು ಕೇಳಿದನು. ಅವರು ಅವನಿಗೆ "ಯೂದಾಯದ ಬೇತ್ಲೆಹೇಮಿನಲ್ಲಿಯೇ; ಯಾಕಂದರೆ... ಪ್ರವಾದಿಯ ಮುಖಾಂತರ ಬರೆದದೆ" ಎಂದು ಹೇಳಿದರು.

ಅವರು ಅರಸನ ಮಾತನ್ನು ಕೇಳಿ ಹೊರಟಾಗ ಮೂಡಣ ದೇಶದಲ್ಲಿ ಕಂಡ ನಕ್ಷತ್ರವು ಅವರ ಮುಂದೆ ಮುಂದೆ ನಡೆದು ಕೂಸು ಇದ್ದ ಸ್ಥಳದ ಮೇಲೆ ಬಂದು ನಿಂತಿತು. ಅವರು ನಕ್ಷತ್ರವನ್ನು ಕಂಡು ಅತ್ಯಂತ ಸಂತೋಷಪಟ್ಟರು.

ಮತ್ತು ಆ ಮನೆಯೊಳಕ್ಕೆ ಹೋಗಿ ಆ ಕೂಸನ್ನು ಅದರ ತಾಯಿಯಾದ ಮರಿಯಳ ಬಳಿಯಲ್ಲಿ ಕಂಡು ಅದಕ್ಕೆ ಸಾಷ್ಟಾಂಗ ನಮಸ್ಕಾರ ಮಾಡಿ ತಮ್ಮ ಗಂಟುಗಳನ್ನು ಬಿಚ್ಚಿ ಅದಕ್ಕೆ ಚಿನ್ನ ಧೂಪ ರಕ್ತಬೋಳಗಳನ್ನು ಕಾಣಿಕೆಯಾಗಿ ಕೊಟ್ಟರು.

– ಮತ್ತಾಯ 2:1–5, 9–11

ಪರಲೋಕದಲ್ಲಿ ಮತ್ತೊಂದು ಲಕ್ಷಣವು ಕಾಣಿಸಿತು. ಅದೇನಂದರೆ ಕೆಂಪಾದ ಮಹಾಘಟಸರ್ಪವಿತ್ತು; (ಸೈತಾನನು) ಅದಕ್ಕೆ ಏಳು ತಲೆಗಳೂ ಹತ್ತು ಕೊಂಬುಗಳೂ ಇದ್ದವು; ಅದರ ತಲೆಗಳ ಮೇಲೆ ಏಳು ಮಕುಟಗಳಿದ್ದವು. ಅದರ ಬಾಲವು ಆಕಾಶದಲ್ಲಿರುವ ನಕ್ಷತ್ರಗಳೊಳಗೆ ಮೂರರಲ್ಲೊಂದು ಭಾಗವನ್ನು ಎಳೆದು ಭೂಮಿಗೆ ಹಾಕಿತು. ಹೆರುತ್ತಿದ್ದ ಆ ಸ್ತ್ರೀಯು ಹೆತ್ತ ಕೂಡಲೆ ಆಕೆಯ ಮಗುವನ್ನು ನುಂಗಿಬಿಡಬೇಕೆಂದು ಆ ಘಟ ಸರ್ಪವು ಅಲ್ಲೇ ಕಾದುಕೊಂಡಿತ್ತು. ಆಕೆ ಜನಾಂಗಗಳನ್ನು ಕಬ್ಬಿಣದ ಕೋಲಿನಿಂದ ಆಳಬೇಕಾದ ಒಂದು ಗಂಡು ಮಗುವನ್ನು ಹೆತ್ತಳು. –ಪ್ರಕಟನೆ 12:3–5a

ಕರ್ತನ ದೂತನು ಯೋಸೇಫನಿಗೆ ಕನಸಿನಲ್ಲಿ ಕಾಣಿಸಿಕೊಂಡು – "ನೀನು ಎದ್ದು ಈ ಕೂಸನ್ನೂ ಇದರ ತಾಯಿಯನ್ನೂ ಕರಕೊಂಡು ಐಗುಪ್ತದೇಶಕ್ಕೆ ಓಡಿ ಹೋಗಿ ನಾನು ನಿನಗೆ ಹೇಳುವ ತನಕ ಅಲ್ಲೇ ಇರು; ಹೆರೋದನು ಈ ಕೂಸನ್ನು ಕೊಲ್ಲಬೇಕೆಂದು ಅದನ್ನು ಹುಡುಕುತ್ತಿರುವನು" ಅಂದನು.

ಆಗ ಅವನು ಎದ್ದು ಕೂಸನ್ನೂ ಅದರ ತಾಯಿಯನ್ನೂ ರಾತ್ರಿ ವೇಳೆಯಲ್ಲಿ ಕರಕೊಂಡು ಐಗುಪ್ತ ದೇಶಕ್ಕೆ ಹೊರಟು ಹೋಗಿ ಹೆರೋದನು ತೀರಿಹೋಗುವ ತನಕ ಅಲ್ಲೇ ಇದ್ದನು.

ಆಗ ಹೆರೋದನು ತನಗೆ ಜೋಯಿಸರು ಮೋಸ ಮಾಡಿದರೆಂದು ತಿಳಿದು ಬಹಳ ಸಿಟ್ಟಾಗಿ ಆಳುಗಳನ್ನು ಕಳುಹಿಸಿ ತಾನು ಜೋಯಿಸರಿಂದ ತಿಳುಕೊಂಡ ಕಾಲಕ್ಕೆ ಸರಿಯಾಗಿ, ಬೇತ್ಲೆಹೇಮಿನಲ್ಲಿಯೂ ಅದರ ಎಲ್ಲಾ ನೆರೆಹೊರೆ ಹಳ್ಳಿಗಳಲ್ಲಿಯೂ ಎರಡು ವರುಷದೊಳಗಿನ ಗಂಡುಕೂಸುಗಳನ್ನೆಲ್ಲಾ ಕೊಲ್ಲಿಸಿದನು.

–ಮತ್ತಾಯ 2:13b–15a, 16

# ಯೇಸುವಿನ ಬಾಲ್ಯ

ಆ ಬಾಲಕನು ಬೆಳೆದು ಬಲಗೊಂಡು ಜ್ಞಾನದಿಂದ ತುಂಬಿದವನಾದನು; ಮತ್ತು ಆತನ ಮೇಲೆ ದೇವರ ದಯವಿತ್ತು. ಆತನ ತಂದೆತಾಯಿಗಳು ಪ್ರತಿವರುಷವೂ ಪಸ್ಕ ಹಬ್ಬದ ಜಾತ್ರೆಗೆ ಯೆರೂಸಲೇಮಿಗೆ ಹೋಗುತ್ತಿದ್ದರು. ಹೀಗಿರಲಾಗಿ ಆತನು ಹನ್ನೆರಡು ವರುಷದವನಾದಾಗ ಅವರು ಹಬ್ಬದ ಪದ್ಧತಿಯ ಪ್ರಕಾರ ಅಲ್ಲಿಗೆ ಹೋದರು... ಹಿಂತಿರುಗಿ ಬರುವಾಗ ಬಾಲಕನಾದ ಯೇಸು ಯೆರೂಸಲೇಮಿ ನಲ್ಲಿಯೇ ಉಳುಕೊಂಡನು... ಆತನು ಯಾತ್ರೆಯವರ ಗುಂಪಿನಲ್ಲಿ ಸೇರಿರುವನು ಎಂದು ಭಾವಿಸಿ ಒಂದು ದಿನದ ಪ್ರಯಾಣ ನಡೆದು ಬಂಧುಬಾಂಧವರಲ್ಲಿಯೂ ಪರಿಚಿತಿಯವರಲ್ಲಿಯೂ ಆತನನ್ನು ಹುಡುಕಿ ಕಾಣದೆ ತಿರಿಗಿ ಯೆರೂಸಲೇಮಿಗೆ ಹುಡುಕಿಕೊಂಡು ಹೋದರು. ಮೂರು ದಿನದ ಮೇಲೆ ಆತನನ್ನು ದೇವಾಲಯದಲ್ಲಿ ಕಂಡರು. ಆತನು ಬೋಧಕರ ನಡುವೆ ಕುಳಿತುಕೊಂಡು ಅವರ ಉಪದೇಶವನ್ನು ಕೇಳುತ್ತಾ ಪ್ರಶ್ನೆ ಮಾಡುತ್ತಾ ಇದ್ದನು. ಆತನು ಆಡಿದ ಮಾತುಗಳನ್ನು ಕೇಳಿದವರೆಲ್ಲರೂ ಆತನ ಬುದ್ಧಿಗೂ ಉತ್ತರಗಳಿಗೂ ಆಶ್ಚರ್ಯಪಟ್ಟರು. ತಂದೆತಾಯಿಗಳು ಆತನನ್ನು ಕಂಡು ಬೆರಗಾದರು; ಮತ್ತು ಆತನ ತಾಯಿಯು–"ಕಂದಾ, ನೀನು ನಮಗೆ ಯಾಕೆ ಹೀಗೆ ಮಾಡಿದಿ? ನಿನ್ನ ತಂದೆಯೂ ನಾನೂ ಎಷ್ಟೋ ತಳಮಳಗೊಂಡು ನಿನ್ನನ್ನು ಹುಡುಕಿ ಬಂದೆವಲ್ಲಾ" ಎಂದು ಹೇಳಲು ಆತನು ಅವರಿಗೆ–"ನೀವು ನನ್ನನ್ನು ಹುಡುಕಿದ್ದೇನು? ನಾನು ನನ್ನ ತಂದೆಯ ಮನೆಯಲ್ಲಿ ಇರಬೇಕಾದದ್ದು ನಿಮಗೆ ತಿಳಿಯಲಿಲ್ಲವೇ?" ಎಂದು ಉತ್ತರಕೊಟ್ಟನು.

ಯೇಸು ಜ್ಞಾನದಲ್ಲಿಯೂ ದೇಹಬಲದಲ್ಲಿಯೂ ವೃದ್ಧಿಯಾಗುತ್ತಾ ಬಂದನು; ಇದಲ್ಲದೆ ದೇವರ ಮತ್ತು ಮನುಷ್ಯರ ದಯೆಯು ಆತನ ಮೇಲೆ ಹೆಚ್ಚಾಗುತ್ತಾ ಬಂತು.

–ಲೂಕ 2:40–49,52

ದೇವರು ಕಳುಹಿಸಿದ ಒಬ್ಬ ಮನುಷ್ಯನು ಬಂದನು; ಅವನ ಹೆಸರು ಯೋಹಾನನು. "ಕರ್ತನ ದಾರಿಯನ್ನು ನೆಟ್ಟಗೆ ಮಾಡಿರಿ ಎಂದು ಅಡವಿಯಲ್ಲಿ ಕೂಗುವವನ ಶಬ್ದವದೆ ಎಂಬುದಾಗಿ ಯೆಶಾಯ ಪ್ರವಾದಿಯು ಹೇಳಿದನಷ್ಟೆ; ಆ ಶಬ್ದವೇ ನಾನು'' ಎಂದು ಉತ್ತರಕೊಟ್ಟನು.

ಮರುದಿನ ಯೋಹಾನನು ತನ್ನ ಕಡೆಗೆ ಬರುವ ಯೇಸುವನ್ನು ನೋಡಿ–"ಅಗೋ (ಯಜ್ಞಕ್ಕೆ) ದೇವರು ನೇಮಿಸಿದ ಕುರಿ, ಲೋಕದ ಪಾಪವನ್ನು ನಿವಾರಣೆ ಮಾಡುವವನು". ಇದಲ್ಲದೆ ಯೋಹಾನನು ಸಾಕ್ಷಿಕೊಟ್ಟು ಹೇಳಿದ್ದೇನೆಂದರೆ–"ದೇವರಾತ್ಮವು ಪಾರಿವಾಳದಂತೆ ಆಕಾಶದಿಂದ ಇಳಿಯುವದನ್ನು ನೋಡಿದೆನು. ಅದು ಆತನ ಮೇಲೆ ನೆಲೆಗೊಂಡಿತು. ನನಗೂ ಆತನ ಗುರುತಿರಲಿಲ್ಲ; ಆದರೆ ನೀರಿನ ಸ್ನಾನವನ್ನು ಮಾಡಿಸುವದಕ್ಕೆ ನನ್ನನ್ನು ಕಳುಹಿಸಿದಾತನು–'ಯಾವನ ಮೇಲೆ ಆತ್ಮವು ಇಳಿದುಬಂದು ಇರುವದನ್ನು ನೀನು ನೋಡುವಿಯೋ ಆತನೇ ಪವಿತ್ರಾತ್ಮದ ಸ್ನಾನವನ್ನು ಕೊಡುವವನು' ಎಂದು ತಾನೇ ನನಗೆ ಹೇಳಿದನು. ನಾನು ಅದನ್ನು ನೋಡಿ ಈತನೇ ದೇವಕುಮಾರನೆಂದು ಸಾಕ್ಷಿಕೊಟ್ಟಿದ್ದೇನೆ" ಅಂದನು.

–ಯೋಹಾನ 1:6,23,29,32–34

ಯೇಸು ಸ್ನಾನಮಾಡಿಸಿಕೊಂಡ ಕೂಡಲೆ ನೀರಿನಿಂದ ಮೇಲಕ್ಕೆ ಬರಲು ಇಗೋ, ಆತನಿಗೆ ಆಕಾಶವು ತೆರೆಯಿತು; ಮತ್ತು ದೇವರ ಆತ್ಮ ಪಾರಿವಾಳದ ಹಾಗೆ ಇಳಿದು ತನ್ನ ಮೇಲೆ ಬರುವದನ್ನು ಕಂಡನು. ಆಗ "ಈತನು ಪ್ರಿಯನಾಗಿರುವ ನನ್ನ ಮಗನು, ಈತನನ್ನು ನಾನು ಮೆಚ್ಚಿದ್ದೇನೆ" ಎಂದು ಆಕಾಶವಾಣಿ ಆಯಿತು.

–ಮತ್ತಾಯ 3:16–17

# ಯೇಸು ಶೋಧನೆಯನ್ನು ಜಯಿಸಿದನು

ಆಗ ಆ ಶೋಧಕನು ಆತನ ಬಳಿಗೆ ಬಂದು– "ನೀನು ದೇವರ ಮಗನಾಗಿದ್ದರೆ ಈ ಕಲ್ಲುಗಳು ರೊಟ್ಟಿಯಾಗುವಂತೆ ಅಪ್ಪಣೆಕೊಡು" ಎಂದು ಹೇಳಲು ಆತನು–"ಮನುಷ್ಯನು ರೊಟ್ಟಿ ತಿಂದ ಮಾತ್ರದಿಂದ ಬದುಕುವದಿಲ್ಲ, ದೇವರ ಬಾಯಿಂದ ಹೊರಡುವ ಪ್ರತಿಯೊಂದು ಮಾತಿನಿಂದಲೂ ಬದುಕುವನು ಎಂದು ಬರದದೆ" ಅಂದನು.

ಆಗ ಸೈತಾನನು ಆತನನ್ನು ಪರಿಶುದ್ಧ ಪಟ್ಟಣಕ್ಕೆ ಕರಕೊಂಡು ಹೋಗಿ ದೇವಾಲಯದ ಶಿಖರದ ಮೇಲೆ ನಿಲ್ಲಿಸಿ ಆತನಿಗೆ – "ನೀನು ದೇವರ ಮಗನಾಗಿದ್ದರೆ ಕೆಳಕ್ಕೆ ದುಮುಕು; ಆತನು ನಿನ್ನ ವಿಷಯವಾಗಿ ತನ್ನ ದೂತರಿಗೆ ಅಪ್ಪಣೆ ಕೊಡುವನು; ನಿನ್ನ ಕಾಲು ಕಲ್ಲಿಗೆ ತಗಲೀತೆಂದು ಅವರು ನಿನ್ನನ್ನು ಕೈಗಳಲ್ಲಿ ಎತ್ತಿಕೊಳ್ಳುವರು" ಎಂಬದಾಗಿ ಬರೆದದೆಯಲ್ಲಾ ಎಂದು ಹೇಳಿದನು.

ಅದಕ್ಕೆ ಯೇಸು–"ನಿನ್ನ ದೇವರಾಗಿರುವ ಕರ್ತನನ್ನು ಪರೀಕ್ಷಿಸಬಾರದು" ಎಂಬದಾಗಿ ಸಹ ಬರೆದದೆ ಅಂದನು. ಬಳಿಕ ಸೈತಾನನು ಆತನನ್ನು ಬಹಳ ಎತ್ತರವಾದ ಬೆಟ್ಟಕ್ಕೆ ಕರಕೊಂಡು ಹೋಗಿ ಪ್ರಪಂಚದ ಎಲ್ಲಾ ರಾಜ್ಯಗಳನ್ನೂ ಅವುಗಳ ವೈಭವವನ್ನೂ ಆತನಿಗೆ ತೋರಿಸಿ–"ನೀನು ನನಗೆ ಸಾಷ್ಟಾಂಗ ನಮಸ್ಕಾರ ಮಾಡಿದರೆ ಇವುಗಳನ್ನೆಲ್ಲಾ ನಿನಗೆ ಕೊಡುವೆನು" ಅಂದನು. ಯೇಸು ಅವನಿಗೆ– "ಸೈತಾನನೇ, ನೀನು ತೊಲಗಿ ಹೋಗು. ನಿನ್ನ ದೇವರಾಗಿರುವ ಕರ್ತನಿಗೆ ಅಡ್ಡಬಿದ್ದು ಆತನೊಬ್ಬನನ್ನೇ ಆರಾಧಿಸಬೇಕು" ಎಂಬದಾಗಿ ಬರೆದದೆ ಎಂದು ಹೇಳಿದನು.

**–ಮತ್ತಾಯ 4:3–10**

ತಾನೇ ಶೋಧಿಸಲ್ಪಟ್ಟು ಬಾಧೆಯನ್ನು ಅನುಭವಿಸಿರುವದರಿಂದ ಶೋಧಿಸಲ್ಪಡುವವರಿಗೆ ಸಹಾಯಮಾಡುವದಕ್ಕೆ ಶಕ್ತನಾಗಿದ್ದಾನೆ.

**–ಇಬ್ರಿಯ 2:18**

ಹೀಗಿರುವಲ್ಲಿ ಆತನು ಗಲಿಲಾಯ ಸಮುದ್ರದ ಬಳಿಯಲ್ಲಿ ಹೋಗುತ್ತಿರುವಾಗ ಸೀಮೋನನೂ ಸೀಮೋನನ ತಮ್ಮನಾದ ಅಂದ್ರೆಯನೂ ಸಮುದ್ರದಲ್ಲಿ ಬಲೆ ಬೀಸುವದನ್ನು ಕಂಡನು. ಅವರು ಬೆಸ್ತರು. ಯೇಸು ಅವರಿಗೆ–"ನನ್ನ ಹಿಂದೆ ಬನ್ನಿರಿ; ಮನುಷ್ಯರನ್ನು ಹಿಡಿಯುವ ಬೆಸ್ತರನ್ನಾಗಿ ನಿಮ್ಮನ್ನು ಮಾಡುವೆನು" ಎಂದು ಹೇಳುತ್ತಲೇ ಅವರು ತಮ್ಮ ಬಲೆಗಳನ್ನು ಬಿಟ್ಟು ಆತನ ಹಿಂದೆ ಹೋದರು. ಇನ್ನೂ ಸ್ವಲ್ಪ ಮುಂದೆ ಹೋಗಿ ಜೆಬೆದಾಯನ ಮಗನಾದ ಯಾಕೋಬನನ್ನೂ ಅವನ ತಮ್ಮನಾದ ಯೋಹಾನನನ್ನೂ ಕಂಡನು. ಇವರು ದೋಣಿಯಲ್ಲಿ ತಮ್ಮ ಬಲೆಗಳನ್ನು ಸರಿಮಾಡುತ್ತಿದ್ದರು. ಕೂಡಲೆ ಇವರನ್ನೂ ಕರೆದನು. ಅವರು ತಮ್ಮ ತಂದೆಯಾದ ಜೆಬೆದಾಯನನ್ನು ಕೂಲಿಯಾಳುಗಳ ಸಂಗಡ ದೋಣಿಯಲ್ಲಿ ಬಿಟ್ಟು ಆತನ ಹಿಂದೆ ಹೋದರು. –ಮಾರ್ಕ 1:16–20

ಮರುದಿನ ಯೇಸು ಗಲಿಲಾಯಕ್ಕೆ ಹೊರಟು ಹೋಗಬೇಕೆಂದಿರುವಾಗ ಫಿಲಿಪ್ಪನನ್ನು ಕಂಡುಕೊಂಡು "ನನ್ನನ್ನು ಹಿಂಬಾಲಿಸು" ಅಂದನು.

–ಯೋಹಾನ 1:43

ಆತನು (ಅಲ್ಲಿಂದ) ಹೋಗುತ್ತಿರುವಾಗ ಸುಂಕಕ್ಕೆ ಕೂತಿದ್ದ ಅಲ್ಫಾಯನ ಮಗನಾದ ಲೇವಿಯನ್ನು ನೋಡಿ– "ನನ್ನನ್ನು ಹಿಂಬಾಲಿಸು" ಎಂದು ಅವನನ್ನು ಕರೆಯಲು ಅವನು ಎದ್ದು ಆತನು ಹಿಂದೆ ಹೋದನು.

–ಮಾರ್ಕ 2:14

ಆ ದಿವಸಗಳಲ್ಲಿ ಆತನು... ರಾತ್ರಿಯನ್ನೆಲ್ಲಾ ಪ್ರಾರ್ಥನೆಯಲ್ಲೇ ಕಳೆದನು. ಬೆಳಗಾದ ಮೇಲೆ ಆತನು ತನ್ನ ಶಿಷ್ಯರನ್ನು ಹತ್ತರಕ್ಕೆ ಕರೆದು ಅವರಲ್ಲಿ ಹನ್ನೆರಡು ಮಂದಿಯನ್ನು ಆರಿಸಿಕೊಂಡು ಅವರಿಗೆ ಅಪೊಸ್ತಲರೆಂತ ಹೆಸರಿಟ್ಟನು. –ಲೂಕ 6:12b–13

# ಯೇಸು ಶುಭಸಂದೇಶವನ್ನು ಸಾರಿದನು

ತರುವಾಯ ಯೇಸು ಪವಿತ್ರಾತ್ಮನ ಶಕ್ತಿಯಿಂದ ಕೂಡಿದವನಾಗಿ ತಿರಿಗಿ ಗಲಿಲಾಯಕ್ಕೆ ಹೋದನು; ಆತನ ಸುದ್ದಿಯು ಸುತ್ತಲಿರುವ ಪ್ರಾಂತ್ಯದಲ್ಲೆಲ್ಲಾ ಹಬ್ಬಿಕೊಂಡಿತು. ಆತನು ಅವರ ಸಭಾಮಂದಿರಗಳಲ್ಲಿ ಬೋಧಿಸುತ್ತಾ ಬಂದನು; ಎಲ್ಲರೂ ಆತನನ್ನು ಹೊಗಳಿದರು. ಹೀಗಿರಲಾಗಿ ಆತನು ತಾನು ಬೆಳೆದ ನಜರೇತಿಗೆ ಬಂದು ತನ್ನ ವಾಡಿಕೆಯ ಪ್ರಕಾರ ಸಬ್ಬತ್ ದಿನದಲ್ಲಿ ಸಭಾಮಂದಿರಕ್ಕೆ ಹೋಗಿ ಓದುವದಕ್ಕಾಗಿ ಎದ್ದು ನಿಂತನು. ಆಗ ಯೆಶಾಯನೆಂಬ ಪ್ರವಾದಿಯ ಗ್ರಂಥದ ಸುರಳಿಯನ್ನು ಆತನ ಕೈಗೆ ಕೊಡಲಾಗಿ ಆತನು ಆ ಸುರಳಿಯನ್ನು ಬಿಚ್ಚಿ ಮುಂದೆ ಹೇಳುವ ಮಾತು ಬರೆದಿರುವ ಸ್ಥಳವನ್ನು ಕಂಡು ಓದಿದನು; ಆ ಮಾತೇನೆಂದರೆ–"ಕರ್ತನ ಆತ್ಮವು ನನ್ನ ಮೇಲೆ ಅದೆ, ಆತನು ನನ್ನನ್ನು ಬಡವರಿಗೆ ಶುಭವರ್ತಮಾನವನ್ನು ಸಾರುವದಕ್ಕೆ ಅಭಿಷೇಕಿಸಿದನು, ಸೆರೆಯವರಿಗೆ ಬಿಡುಗಡೆಯಾಗುವದನ್ನು ಮತ್ತು ಕುರುಡರಿಗೆ ಕಣ್ಣುಬರುವದನ್ನು ಪ್ರಸಿದ್ಧಿ ಪಡಿಸುವದಕ್ಕೂ ಮನಮುರಿದವರನ್ನು ಬಿಡಿಸಿ ಕಳುಹಿಸುವದಕ್ಕೂ ಕರ್ತನು ನೇಮಿಸಿರುವ ಶುಭ ವರ್ಷವನ್ನು ಪ್ರಚುರಪಡಿಸುವದಕ್ಕೂ ಆತನು ನನ್ನನ್ನು ಕಳುಹಿಸಿದ್ದಾನೆ" ಎಂಬುದು. ಓದಿದ ಮೇಲೆ ಆತನು ಆ ಸುರಳಿಯನ್ನು ಸುತ್ತಿ ಸಭಾಮಂದಿರದ ಆಳಿನ ಕೈಗೆ ಕೊಟ್ಟು ಕೂತುಕೊಂಡನು. ಅಲ್ಲಿದ್ದವರೆಲ್ಲರ ಕಣ್ಣುಗಳು ಆತನ ಮೇಲೆಯೇ ಬಿದ್ದಿರಲಾಗಿ ಆತನು ಅವರಿಗೆ– "ಈ ಹೊತ್ತು ನೀವು ನನ್ನ ಮಾತನ್ನು ಕೇಳುವಲ್ಲಿ ಈ ವೇದೋಕ್ತಿ ನೆರವೇರಿದೆ ಎಂದು ಹೇಳುತ್ತಿರುವಾಗ ಎಲ್ಲರೂ ಆತನನ್ನು ಹೊಗಳಿ ಆತನ ಬಾಯಿಂದ ಹೊರಡುವ ಇಂಪಾದ ಮಾತುಗಳಿಗೆ ಆಶ್ಚರ್ಯಪಟ್ಟು...

–ಲೂಕ 4:14–22a

## ಯೇಸು ದೇವಾಲಯವನ್ನು ಶುದ್ಧ ಮಾಡಿದನು

ಅವರು ಯೆರೂಸಲೇಮಿಗೆ ಬಂದಾಗ ಯೇಸು ದೇವಾಲಯಕ್ಕೆ ಹೋಗಿ ಅದರಲ್ಲಿ ಮಾರುವವರನ್ನೂ ಕೊಳ್ಳುವವರನ್ನೂ ಹೊರಡಿಸಿ ಬಿಡುವದಕ್ಕೆ ಪ್ರಾರಂಭಿಸಿ ಚಿನಿವಾರರ ಮೇಜುಗಳನ್ನೂ ಪಾರಿವಾಳ ಮಾರುವವರ ಕಾಲ್ಮಣೆಗಳನ್ನೂ ಕೆಡವಿದನು. ಮತ್ತು ಆತನು ಉಪದೇಶ ಮಾಡಿ–“ನನ್ನ ಆಲಯವು ಎಲ್ಲಾ ಜನಾಂಗಗಳಿಗೂ ಪ್ರಾರ್ಥನಾಲಯವೆನಿಸಿಕೊಳ್ಳುವದು ಎಂದು ಬರೆದಿದೆಯಲ್ಲಾ? ಆದರೆ ನೀವು ಅದನ್ನು ಕಳ್ಳರ ಗವಿ ಮಾಡಿದ್ದೀರಿ” ಎಂದು ಹೇಳಿದನು.

–ಮಾರ್ಕ 11:15,17

## ಯೇಸು ಪಾಪದ ಕುರಿತು ಕಲಿಸಿದನು

“ಹಾಗೆಯೇ ನೀವು ಸಹ ಹೊರಗೆ ಜನರಿಗೆ ಸತ್ಪುರುಷರಂತೆ ಕಾಣಿಸಿಕೊಳ್ಳುತ್ತೀರಿ ಸರಿ, ಆದರೆ ಒಳಗೆ ಕಪಟದಿಂದಲೂ ಅನ್ಯಾಯದಿಂದಲೂ ತುಂಬಿದವರಾಗಿದ್ದೀರಿ”. –ಮತ್ತಾಯ 23:28

“ಆದರೆ ಬಾಯೊಳಗಿಂದ ಹೊರಡುವಂಥವುಗಳು ಮನಸ್ಸಿನೊಳಗಿಂದ ಬರುತ್ತವೆ; ಇವೇ ಮನುಷ್ಯನನ್ನು ಹೊಲೆ ಮಾಡುವವು. ಹೇಗೆಂದರೆ ಮನಸ್ಸಿನೊಳಗಿಂದ ಕೆಟ್ಟ ಆಲೋಚನೆ, ಕೊಲೆ, ಹಾದರ, ಸೂಳೆಗಾರಿಕೆ, ಕಳ್ಳತನ, ಸುಳ್ಳುಸಾಕ್ಷಿ, ಬೈಗಳು ಹೊರಟು ಬರುತ್ತವೆ”.

–ಮತ್ತಾಯ 15:18–19.

ಅದಕ್ಕೆ ಯೇಸು – “ನಿಮಗೆ ನಿಜನಿಜವಾಗಿ ಹೇಳುತ್ತೇನೆ, ಪಾಪ ಮಾಡುವವರೆಲ್ಲರು ಪಾಪಕ್ಕೆ ದಾಸರಾಗಿದ್ದಾರೆ. ಆದದರಿಂದ ಮಗನು ನಿಮ್ಮನ್ನು ಬಿಡುಗಡೆ ಮಾಡಿದರೆ ನಿಜವಾಗಿ ನಿಮಗೆ ಬಿಡುಗಡೆಯಾಗುವದು”. –ಯೋಹಾನ 8:34,36

ಅದಕ್ಕೆ ಯೇಸು–"ನಾನು ನಿಜನಿಜವಾಗಿ ಹೇಳುತ್ತೇನೆ, ಒಬ್ಬನು ಹೊಸದಾಗಿ ಹುಟ್ಟದಿದ್ದರೆ ಅವನು ದೇವರ ರಾಜ್ಯವನ್ನು ಕಾಣಲಾರನು ಅಂದನು.'ನೀವು ಹೊಸದಾಗಿ ಹುಟ್ಟಬೇಕು' ಎಂದು ನಾನು ನಿನಗೆ ಹೇಳಿದ್ದರಿಂದ ಆಶ್ಚರ್ಯ ಪಡಬೇಡ. ದೇವರು ಲೋಕದ ಮೇಲೆ ಎಷ್ಟೋ ಪ್ರೀತಿಯನ್ನಿಟ್ಟು ತನ್ನ ಒಬ್ಬನೇ ಮಗನನ್ನು ಕೊಟ್ಟನು; ಆತನನ್ನು ನಂಬುವ ಒಬ್ಬನಾದರೂ ನಾಶವಾಗದೆ ಎಲ್ಲರೂ ನಿತ್ಯಜೀವವನ್ನು ಪಡೆಯಬೇಕೆಂದು ಆತನನ್ನು ಕೊಟ್ಟನು".

–ಯೋಹಾನ 3:3,7,16

"ನಾನಾದರೋ ಅವುಗಳಿಗೆ ಜೀವವು ಇರಬೇಕೆಂತಲೂ ಅದು ಸಮೃದ್ಧಿಯಾಗಿ ಇರಬೇಕೆಂತಲೂ ಬಂದೆನು". –ಯೋಹಾನ 10:10b

"ಒಬ್ಬನೇ ಸತ್ಯದೇವರಾಗಿರುವ ನಿನ್ನನ್ನೂ ನೀನು ಕಳುಹಿಸಿಕೊಟ್ಟ ಯೇಸುಕ್ರಿಸ್ತನನ್ನೂ ತಿಳಿಯುವದೇ ನಿತ್ಯಜೀವವು". –ಯೋಹಾನ 17:3

"ತಂದೆಯು ಹೇಗೆ ಸತ್ತವರನ್ನು ಎಬ್ಬಿಸಿ ಬದುಕಿಸುತ್ತಾನೋ ಹಾಗೆಯೇ ಮಗನು ಸಹ ತನಗೆ ಬೇಕಾದವರನ್ನು ಬದುಕಿಸುತ್ತಾನೆಂದು ತಿಳುಕೊಳ್ಳಿರಿ. ನಿಮಗೆ ನಿಜನಿಜವಾಗಿ ಹೇಳುತ್ತೇನೆ, ನನ್ನ ವಾಕ್ಯವನ್ನು ಕೇಳಿ ನನ್ನನ್ನು ಕಳುಹಿಸಿದಾತನನ್ನು ನಂಬುವವನು ನಿತ್ಯಜೀವವನ್ನು ಹೊಂದಿದ್ದಾನೆ. ಅವನು ತೀರ್ಪಿಗೆ ಗುರಿಯಾಗುವದಿಲ್ಲ; ಮರಣದಿಂದ ಪಾರಾಗಿ ಜೀವಕ್ಕೆ ಸೇರಿದ್ದಾನೆ". – ಯೋಹಾನ 5:21,24

"ಹೀಗಿರಲಾಗಿ ಯಾವನಾದರೂ ಕ್ರಿಸ್ತನಲ್ಲಿದ್ದರೆ ಅವನು ನೂತನ ಸೃಷ್ಟಿಯಾದನು. ಇಗೋ, ಪೂರ್ವಸ್ಥಿತಿ ಹೋಗಿ ಎಲ್ಲಾ ನೂತನವಾಯಿತು".

–2 ಕೊರಿಂಥ 5:17

ಹೋಗುವಾಗ ಸಮಾರ್ಯ ಸೀಮೆಗೆ ಸೇರಿದ ಸುಖರೆಂಬ ಊರಿಗೆ ಬಂದನು... ಯೇಸು ದಾರಿನಡೆದು ದಣಿದು ಆ ಬಾವಿಯ ಬಳಿಯಲ್ಲಿ ಹಾಗೆ ಕೂತುಕೊಂಡನು... ಸಮಾರ್ಯದವಳಾದ ಒಬ್ಬ ಹೆಂಗಸು ನೀರು ಸೇದುವದಕ್ಕೆ ಬಂದಳು. ಯೇಸು ಆಕೆಯನ್ನು "ಅಮ್ಮಾ, ನೀರು ಕುಡಿಯುವದಕ್ಕೆ ಕೊಡು" ಎಂದು ಕೇಳಿದನು. ಯೆಹೂದ್ಯರಿಗೂ ಸಮಾರ್ಯರಿಗೂ ಬಳಿಕೆಯಿಲ್ಲದಿರಲಾಗಿ ಆ ಸಮಾರ್ಯದವಳು ಆತನಿಗೆ– "ಯೆಹೂದ್ಯನಾದ ನೀನು ಸಮಾರ್ಯದವಳಾದ ನನ್ನನ್ನು ನೀರು ಬೇಡುವದು ಹೇಗೆ" ಎಂದು ಹೇಳಿದಳು. ಅದಕ್ಕೆ ಯೇಸು–"ದೇವರು ಕೊಡುವ ವರವೇನೆಂಬದೂ ಕುಡಿಯುವದಕ್ಕೆ ನೀರುಕೊಡು ಎಂದು ನಿನಗೆ ಹೇಳಿದವನು ಯಾರೆಂಬದೂ ನಿನಗೆ ತಿಳಿದಿದ್ದರೆ ನೀನು ಅವನನ್ನು ಬೇಡಿಕೊಳ್ಳುತ್ತಿದ್ದಿ, ಅವನು ನಿನಗೆ ಜೀವಕರವಾದ ನೀರನ್ನು ಕೊಡುತ್ತಿದ್ದನು" ಅಂದನು. ಯೇಸು ಆಕೆಗೆ – "ಈ ನೀರನ್ನು ಕುಡಿಯುವವರೆಲ್ಲರಿಗೆ ತಿರುಗಿ ನೀರಡಿಕೆಯಾಗುವದು; ನಾನು ಕೊಡುವ ನೀರನ್ನು ಕುಡಿದವನಿಗೆ ಎಂದಿಗೂ ನೀರಡಿಕೆಯಾಗುವದಿಲ್ಲ; ನಾನು ಅವನಿಗೆ ಕೊಡುವ ನೀರು ಅವನಲ್ಲಿ ಉಕ್ಕುವ ಒರತೆಯಾಗಿದ್ದು ನಿತ್ಯಜೀವವನ್ನು ಉಂಟುಮಾಡುವದು" ಎಂದು ಹೇಳಿದನು. –ಯೋಹಾನ 4:5–10,13–4

...ಯೇಸು ನಿಂತುಕೊಂಡು – "ಯಾವನಿಗಾದರೂ ನೀರಡಿಕೆಯಾಗಿದ್ದರೆ ಅವನು ನನ್ನ ಬಳಿಗೆ ಬಂದು ಕುಡಿಯಲಿ, ನನ್ನನ್ನು ನಂಬಿದವನ ಹೊಟ್ಟೆಯೊಳಗಿಂದ ಶಾಸ್ತ್ರದಲ್ಲಿ ಹೇಳಿರುವ ಪ್ರಕಾರ ಜೀವಕರವಾದ ನೀರಿನ ಹೊಳೆಗಳು ಹರಿಯುವವು" ಎಂದು ಕೂಗಿ ಹೇಳಿದನು. ಇದನ್ನು ಯೇಸು ತನ್ನನ್ನು ನಂಬಿದವರು ಹೊಂದಲಿರುವ ಪವಿತ್ರಾತ್ಮವರವನ್ನು ಕುರಿತು ಹೇಳಿದನು. – ಯೋಹಾನ 7:37b–39a

"ಆದದರಿಂದ, ಈ ನನ್ನ ಮಾತುಗಳನ್ನು ಕೇಳಿ ಅವುಗಳಂತೆ ನಡೆಯುವವನು ಬಂಡೆಯ ಮೇಲೆ ಮನೆಯನ್ನು ಕಟ್ಟಿಕೊಂಡ ಬುದ್ಧಿಯುಳ್ಳ ಮನುಷ್ಯನನ್ನು ಹೋಲುವನು. ಕಟ್ಟಿದ ಮೇಲೆ ಮಳೆ ಸುರಿಯಿತು; ಹಳ್ಳಗಳು ಬಂದವು; ನಾಲ್ಕು ಕಡೆಯಿಂದ ಗಾಳಿ ಬೀಸಿ ಆ ಮನೆಗೆ ಬಡಿಯಿತು. ಆದಾಗ್ಯೂ ಅದರ ಅಸ್ತಿವಾರವು ಬಂಡೆಯ ಮೇಲಿದ್ದದರಿಂದ ಅದು ಬೀಳಲಿಲ್ಲ. ಆದರೆ ಈ ನನ್ನ ಮಾತುಗಳನ್ನು ಕೇಳಿಯೂ ಅವುಗಳಂತೆ ನಡೆಯದ ಪ್ರತಿಯೊಬ್ಬನು ಉಸುಬಿನ ಮೇಲೆ ಮನೆಯನ್ನು ಕಟ್ಟಿಕೊಂಡ ಬುದ್ಧಿಹೀನ ಮನುಷ್ಯನನ್ನು ಹೋಲುವನು. ಕಟ್ಟಿದ ಮೇಲೆ ಮಳೆ ಸುರಿಯಿತು; ಹಳ್ಳಗಳು ಬಂದವು; ನಾಲ್ಕು ಕಡೆಯಿಂದ ಗಾಳಿಬೀಸಿ ಆ ಮನೆಗೆ ಹೊಡೆಯಿತು. ಆಗ ಅದು ಧಡಮ್ಮನೆ ಕಡುಕೊಂಡು ಬಿತ್ತು". –ಮತ್ತಾಯ 7:24–27

ಅದೇನೆಂದರೆ – "ನಿಮ್ಮೊಳಗೆ ಯಾವ ಮನುಷ್ಯನಾದರೂ ತನಗೆ ನೂರು ಕುರಿಗಳಿರಲಾಗಿ ಅವುಗಳಲ್ಲಿ ಒಂದು ಕಳೆದು ಹೋದರೆ ಅವನು ತೊಂಭತ್ತೊಂಭತ್ತನ್ನು ಅಡವಿಯಲ್ಲಿ ಬಿಟ್ಟು ಕಳೆದು ಹೋದದ್ದು ಸಿಕ್ಕುವ ತನಕ ಅದನ್ನು ಹುಡುಕಿಕೊಂಡು ಹೋಗದೆ ಇದ್ದಾನೇ? ಸಿಕ್ಕಿದ ಮೇಲೆ ಅವನು ಸಂತೋಷಪಡುತ್ತಾ ಅದನ್ನು ತನ್ನ ಹೆಗಲಿನ ಮೇಲೆ ಇಟ್ಟುಕೊಂಡು ಮನೆಗೆ ಬಂದು ಸ್ನೇಹಿತರನ್ನೂ ನೆರೆಹೊರೆಯವರನ್ನೂ ಕೂಡಿಸಿ–'ಕಳೆದು ಹೋಗಿದ್ದ ಕುರಿ ಸಿಕ್ಕಿತು, ನನ್ನ ಸಂಗಡ ಸಂತೋಷಿಸಿರಿ' ಎಂದು ಅವರಿಗೆ ಹೇಳುವವನಲ್ಲವೇ. ಅದರಂತೆ ದೇವರ ಕಡೆಗೆ ತಿರುಗಿಕೊಳ್ಳುವದಕ್ಕೆ ಅವಶ್ಯವಿಲ್ಲದ ತೊಂಭತ್ತೊಂಭತ್ತು ಮಂದಿ ನೀತಿವಂತರಿಗಿಂತ ದೇವರ ಕಡೆಗೆ ತಿರುಗಿಕೊಳ್ಳುವ ಒಬ್ಬ ಪಾಪಿಯ ವಿಷಯವಾಗಿ ಪರಲೋಕದಲ್ಲಿ ಸಂತೋಷ ವುಂಟಾಗುವದೆಂದು ನಿಮಗೆ ಹೇಳುತ್ತೇನೆ". –ಲೂಕ 15:4–7

ಆತನು ಆ ಜನರ ಗುಂಪುಗಳನ್ನು ಕಂಡು ಬೆಟ್ಟವನ್ನೇರಿ ಕೂತುಕೊಂಡ ತರುವಾಯ......... ಆತನು ಅವರಿಗೆ ಉಪದೇಶ ಮಾಡಿ ಹೇಳಿದ್ದೇನಂದರೆ– "ಆತ್ಮದಲ್ಲಿ ಬಡವರಾಗಿರುವವರು ಧನ್ಯರು; ಪರಲೋಕ ರಾಜ್ಯವು ಅವರದು. ದುಃಖಪಡುವವರು ಧನ್ಯರು; ಅವರು ಸಮಾಧಾನ ಹೊಂದುವರು. ಶಾಂತರು ಧನ್ಯರು; ಅವರು ಭೂಮಿಗೆ ಬಾಧ್ಯರಾಗುವರು. ನೀತಿಗೆ ಹಸಿದು ಬಾಯಾರಿದವರು ಧನ್ಯರು; ಅವರಿಗೆ ತೃಪ್ತಿಯಾಗುವದು. ಕರುಣೆಯುಳ್ಳವರು ಧನ್ಯರು; ಅವರು ಕರುಣೆ ಹೊಂದುವರು. ನಿರ್ಮಲಚಿತ್ತರು ಧನ್ಯರು; ಅವರು ದೇವರನ್ನು ನೋಡುವರು. ಸಮಾಧಾನ ಪಡಿಸುವವರು ಧನ್ಯರು; ಅವರು ದೇವರ ಮಕ್ಕಳು ಅನ್ನಿಸಿಕೊಳ್ಳುವರು. ನೀತಿಯ ನಿಮಿತ್ತವಾಗಿ ಹಿಂಸೆಯನ್ನು ತಾಳಿಕೊಳ್ಳುವವರು ಧನ್ಯರು; ಪರಲೋಕರಾಜ್ಯವು ಅವರದು. ನನ್ನ ನಿಮಿತ್ತವಾಗಿ ಜನರು ನಿಮ್ಮನ್ನು ನಿಂದಿಸಿ ಹಿಂಸೆಪಡಿಸಿ ನಿಮ್ಮ ಮೇಲೆ ಕೆಟ್ಟಕೆಟ್ಟ ಮಾತುಗಳನ್ನು ಸುಳ್ಳಾಗಿ ಹೊರಿಸಿದರೆ ನೀವು ಧನ್ಯರು, ಸಂತೋಷಪಡಿರಿ, ಉಲ್ಲಾಸಪಡಿರಿ; ಪರ ಲೋಕದಲ್ಲಿ ನಿಮಗೆ ಬಹಳ ಫಲ ಸಿಕ್ಕುವದು".

–ಮತ್ತಾಯ 5:1–12a

"ದೇವರು ವಾಕ್ಯವನ್ನು ಕೇಳಿ ಅದಕ್ಕೆ ಸರಿಯಾಗಿ ನಡಕೊಳ್ಳುವವರೇ ಧನ್ಯರು". –ಲೂಕ 11:28b

"ನೋಡದೆ ನಂಬಿದವರು ಧನ್ಯರು" ಎಂದು ಹೇಳಿದನು. –ಯೋಹಾನ 20:29b

"ನನ್ನ ವಿಷಯದಲ್ಲಿ ಸಂಶಯಪಡದವನೇ ಧನ್ಯನು" ಎಂದು ಹೇಳಿದನು.

–ಲೂಕ 7:23

# ಯೇಸು ಪ್ರಾರ್ಥನೆಯ ಕುರಿತು ಕಲಿಸಿದನು

ಬೇಸರಗೊಳ್ಳದಂತೆ ಯಾವಾಗಲೂ ಪ್ರಾರ್ಥನೆ ಮಾಡುತ್ತಿರಬೇಕೆಂಬುದಕ್ಕೆ ... ಸಾಮ್ಯವನ್ನು ಹೇಳಿದನು.

–ಲೂಕ 18:1a

"ಪ್ರಾರ್ಥನೆ ಮಾಡಬೇಕೆಂದು ಇಬ್ಬರು ಮನುಷ್ಯರು ದೇವಾಲಯಕ್ಕೆ ಹೋದರು; ಒಬ್ಬನು ಫರಿಸಾಯನು, ಒಬ್ಬನು ಸುಂಕದವನು. ಫರಿಸಾಯನು ನಿಂತುಕೊಂಡು ಪ್ರಾರ್ಥಿಸುವಾಗ ತನ್ನೊಳಗೆ–ದೇವರೇ, ಸುಲುಕೊಳ್ಳುವವರೂ ಅನ್ಯಾಯಗಾರರೂ ಹಾದರ ಮಾಡುವವರೂ ಆಗಿರುವ ಉಳಿದ ಜನರಂತೆ ನಾನಲ್ಲ, ಈ ಸುಂಕದವನಂತೆಯೂ ಅಲ್ಲ; ಆದುದರಿಂದ ನಿನಗೆ ಸ್ತೋತ್ರಮಾಡುತ್ತೇನೆ. ವಾರಕ್ಕೆ ಎರಡಾವರ್ತಿ ಉಪವಾಸ ಮಾಡುತ್ತೇನೆ; ನಾನು ಸಂಪಾದಿಸುವ ಎಲ್ಲಾದರಲ್ಲಿಯೂ ಹತ್ತರಲ್ಲೊಂದು ಪಾಲು ಕೊಡುತ್ತೇನೆ. ಅಂದುಕೊಂಡನು. ಆದರೆ ಆ ಸುಂಕದವನು ದೂರದಲ್ಲಿ ನಿಂತು ಆಕಾಶದ ಕಡೆಗೆ ಕಣ್ಣೆತ್ತಿ ನೋಡುವದಕ್ಕೂ ಮನಸ್ಸಿಲ್ಲದೆ ಎದೆಯನ್ನು ಬಡುಕೊಳ್ಳುತ್ತಾ – ದೇವರೇ, ಪಾಪಿಯಾದ ನನ್ನನ್ನು ಕರುಣಿಸು ಅಂದನು. ಇವನು ನೀತಿವಂತನೆಂದು ನಿರ್ಣಯಿಸಲ್ಪಟ್ಟವನಾಗಿ ತನ್ನ ಮನೆಗೆ ಹೋದನು, ಆ ಫರಿಸಾಯನು ಅಂಥವನಾಗಿ ಹೋಗಲಿಲ್ಲ ಎಂದು ನಿಮಗೆ ಹೇಳುತ್ತೇನೆ. ತನ್ನನ್ನು ಹೆಚ್ಚಿಸಿಕೊಳ್ಳುವ ಪ್ರತಿಯೊಬ್ಬನು ತಗ್ಗಿಸಲ್ಪಡುವನು; ತನ್ನನ್ನು ತಗ್ಗಿಸಿಕೊಳ್ಳುವವನು ಹೆಚ್ಚಿಸಲ್ಪಡುವನು ಅಂದನು.

–ಲೂಕ 18:10–14

"ಇದಲ್ಲದೆ ನಿಮ್ಮಲ್ಲಿ ಇಬ್ಬರು ತಾವು ಬೇಡಿಕೊಳ್ಳತಕ್ಕ ಯಾವದಾದರೂ ಒಂದು ಕಾರ್ಯದ ವಿಷಯವಾಗಿ ಭೂಲೋಕದಲ್ಲಿ ಒಂದೇ ಮನಸ್ಸುಳ್ಳವರಾಗಿದ್ದರೆ ಅದು ಪರಲೋಕದಲ್ಲಿರುವ ನನ್ನ ತಂದೆಯಿಂದ ಅವರಿಗೆ ಆಗುವದೆಂದು ನಿಮಗೆ ಹೇಳುತ್ತೇನೆ. ಯಾಕೆಂದರೆ ಇಬ್ಬರು ಮೂವರು ನನ್ನ ಹೆಸರಿನಲ್ಲಿ ಎಲ್ಲಿ ಕೂಡಿಬಂದಿರುತ್ತಾರೋ ಅಲ್ಲಿ ಅವರ ನಡುವೆ ನಾನು ಇದ್ದೇನೆ" ಅಂದನು.

–ಮತ್ತಾಯ 18:19–20

ಮತ್ತು ಯೇಸು ತನ್ನ ಶಿಷ್ಯರಿಗೆ ಹೇಳಿದ್ದೇನೆಂದರೆ "ಯಾವನಿಗಾದರೂ ನನ್ನ ಹಿಂದೆ ಬರುವದಕ್ಕೆ ಮನಸ್ಸಿದ್ದರೆ ಅವನು ತನ್ನನ್ನು ನಿರಾಕರಿಸಿ ತನ್ನ ಶಿಲುಬೆಯನ್ನು ಹೊತ್ತುಕೊಂಡು ನನ್ನ ಹಿಂದೆ ಬರಲಿ. ತನ್ನ ಪ್ರಾಣವನ್ನು ಉಳಿಸಿಕೊಳ್ಳಬೇಕೆಂದಿರುವವನು ಅದನ್ನು ಕಳಕೊಳ್ಳುವನು. ಒಬ್ಬ ಮನುಷ್ಯನು ಲೋಕವನ್ನೆಲ್ಲಾ ಸಂಪಾದಿಸಿಕೊಂಡರೂ ಪ್ರಾಣನಷ್ಟಪಟ್ಟರೆ ಅವನಿಗೆ ಪ್ರಯೋಜನವೇನು?"

–ಮತ್ತಾಯ 16:24–26a

"ಹಾಗೆಯೇ ನಿಮ್ಮಲ್ಲಿ ಯಾವನೇ ಆಗಲಿ ತನಗಿರುವದನ್ನೆಲ್ಲಾ ಬಿಟ್ಟುಬಿಡದೆ ಹೋದರೆ ಅವನು ನನ್ನ ಶಿಷ್ಯನಾಗಿರಲಾರನು". –ಲೂಕ 14:33

"ನೀವು ನನ್ನನ್ನು ಪ್ರೀತಿಸುವವರಾದರೆ ನನ್ನ ಆಜ್ಞೆಗಳನ್ನು ಕೈಕೊಂಡು ನಡೆಯುವಿರಿ".

–ಯೋಹಾನ 14:15

"ನಾನು ನಿಮ್ಮನ್ನು ಪ್ರೀತಿಸಿದ ಮೇರೆಗೆ ನೀವು ಒಬ್ಬರನ್ನೊಬ್ಬರು ಪ್ರೀತಿಸಬೇಕೆಂಬುದೇ ನಾನು ಕೊಡುವ ಆಜ್ಞೆಯಾಗಿದೆ". –ಯೋಹಾನ 15:12

"ನಿಮ್ಮೊಳಗೆ ಒಬ್ಬರ ಮೇಲೊಬ್ಬರಿಗೆ ಪ್ರೀತಿಯಿದ್ದರೆ ಎಲ್ಲರೂ ನಿಮ್ಮನ್ನು ನನ್ನ ಶಿಷ್ಯರೆಂದು ತಿಳುಕೊಳ್ಳುವರು ಅಂದನು". –ಯೋಹಾನ 13:35

ಆಗ ಯೇಸು ತನ್ನನ್ನು ನಂಬಿದ ಯೆಹೂದ್ಯರಿಗೆ– "ನೀವು ನನ್ನ ವಾಕ್ಯದಲ್ಲಿ ನೆಲೆಗೊಂಡವರಾದರೆ ನಿಜವಾಗಿ ನನ್ನ ಶಿಷ್ಯರಾಗಿದ್ದು ಸತ್ಯವನ್ನು ತಿಳಿದುಕೊಳ್ಳುವಿರಿ". –ಯೋಹಾನ 8:31

"ನೀವು ಬಹಳ ಫಲಕೊಡುವದರಿಂದಲೇ ನನ್ನ ತಂದೆಗೆ ಮಹಿಮೆ ಉಂಟಾಗುವದು; ಮತ್ತು ನನ್ನ ಶಿಷ್ಯರಾಗುವಿರಿ". –ಯೋಹಾನ 15:8

# ಯೇಸು ಪರಲೋಕ ಮತ್ತು ನರಕದ ಕುರಿತು ಕಲಿಸಿದನು

"ನನ್ನನ್ನು ಸ್ವಾಮಿ, ಸ್ವಾಮಿ ಅನ್ನುವವರೆಲ್ಲರು ಪರಲೋಕರಾಜ್ಯದಲ್ಲಿ ಸೇರುವರೆಂದು ನೆನಸಬೇಡಿರಿ; ಪರಲೋಕದಲ್ಲಿರುವ ನನ್ನ ತಂದೆಯ ಚಿತ್ತದಂತೆ ನಡೆಯುವವನೇ ಪರಲೋಕರಾಜ್ಯಕ್ಕೆ ಸೇರುವನು".

–ಮತ್ತಾಯ 7:21

"ನೀವು ತಿರುಗಿಕೊಂಡು ಚಿಕ್ಕ ಮಕ್ಕಳಂತೆ ಆಗದೆ ಹೋದರೆ ನೀವು ಪರಲೋಕರಾಜ್ಯದಲ್ಲಿ ಸೇರುವದೇ ಇಲ್ಲವೆಂದು ನಿಮಗೆ ಸತ್ಯವಾಗಿ ಹೇಳುತ್ತೇನೆ".

–ಮತ್ತಾಯ 18:3b

"ಇಕ್ಕಟ್ಟಾದ ಬಾಗಲಿನಿಂದ ಒಳಕ್ಕೆ ಹೋಗಿರಿ. ನಾಶಕ್ಕೆ ಹೋಗುವ ಬಾಗಲು ದೊಡ್ಡದು, ದಾರಿ ಅಗಲವು; ಅದರಲ್ಲಿ ಹೋಗುವವರು ಬಹು ಜನ. ನಿತ್ಯಜೀವಕ್ಕೆ ಹೋಗುವ ಬಾಗಲು ಇಕ್ಕಟ್ಟು, ದಾರಿ ಬಿಕ್ಕಟ್ಟು; ಅದನ್ನು ಕಂಡು ಹಿಡಿಯುವವರು ಸ್ವಲ್ಪ ಜನ".

–ಮತ್ತಾಯ 7:13–14

"ಹಾಗೆಯೇ ಯುಗದ ಸಮಾಪ್ತಿಯಲ್ಲಿ ಆಗುವದು. ದೇವದೂತರು ಹೊರಟು ಬಂದು ನೀತಿವಂತರೊಳಗಿಂದ ಕೆಟ್ಟವರನ್ನು ಬೇರೆ ಮಾಡಿ ಅವರನ್ನು ಬೆಂಕೀಕೊಂಡದಲ್ಲಿ ಹಾಕುವರು. ಅಲ್ಲಿ ಗೋಳಾಟವು ಕಟಕಟನೆ ಹಲ್ಲು ಕಡಿ ಯೋಣವು ಇರುವವು". –ಮತ್ತಾಯ 13:49–50

"ನಿಮ್ಮ ಹೃದಯವು ಕಳವಳಗೊಳ್ಳದೆ ಇರಲಿ; ದೇವರನ್ನು ನಂಬಿರಿ, ನನ್ನನ್ನೂ ನಂಬಿರಿ. ನನ್ನ ತಂದೆಯ ಮನೆಯಲ್ಲಿ ಬಹಳ ಬಿಡಾರಗಳು ಅವೆ; ಇಲ್ಲದಿದ್ದರೆ ನಿಮಗೆ ಹೇಳುತ್ತಿದ್ದೆನು; ನಿಮಗೆ ಸ್ಥಳವನ್ನು ಸಿದ್ಧಮಾಡುವದಕ್ಕೆ ಹೋಗುತ್ತೇನೆಲ್ಲಾ. ನಾನು ಹೋಗಿ ನಿಮಗೆ ಸ್ಥಳವನ್ನು ಸಿದ್ಧಮಾಡಿದ ಮೇಲೆ ತಿರಿಗಿ ಬಂದು ನಿಮ್ಮನ್ನು ಕರಕೊಂಡು ಹೋಗಿ ನನ್ನ ಬಳಿಗೆ ಸೇರಿಸಿಕೊಳ್ಳುವೆನು; ಯಾಕೆಂದರೆ ನಾನಿರುವ ಸ್ಥಳದಲ್ಲಿ ನೀವು ಸಹ ಇರಬೇಕು". –ಯೋಹಾನ 14:1–3

"ಪರಲೋಕದಿಂದ ಇಳಿದು ಬರುವ ಜೀವವುಳ್ಳ ರೊಟ್ಟಿಯು ನಾನೇ; ಈ ರೊಟ್ಟಿಯನ್ನು ಯಾವನಾದರೂ ತಿಂದರೆ ಅವನು ಸದಾಕಾಲ ಬದುಕುವನು. ಮತ್ತು ನಾನು ಕೊಡುವ ರೊಟ್ಟಿ ನನ್ನ ಮಾಂಸವೇ; ಅದನ್ನು ಲೋಕದ ಜೀವಕ್ಕೋಸ್ಕರ ಕೊಡುವೆನು ಎಂದು ಹೇಳಿದನು". **–ಯೋಹಾನ 6:51**

"ನಾನೇ ಆ ಬಾಗಲು; ನನ್ನ ಮುಖಾಂತರವಾಗಿ ಯಾವನಾದರೂ ಒಳಗೆ ಹೊದರೆ ಸುರಕ್ಷಿತವಾಗಿದ್ದು ಒಳಗೆ ಹೋಗುವನು, ಹೊರಗೆ ಬರುವನು, ಮೇವನ್ನು ಕಂಡುಕೊಳ್ಳುವನು. ನಾನೇ ಒಳ್ಳೇ ಕುರುಬನು; ಒಳ್ಳೇ ಕುರುಬನು ತನ್ನ ಕುರಿಗಳಿಗೋಸ್ಕರ ತನ್ನ ಪ್ರಾಣವನ್ನು ಕೊಡುತ್ತಾನೆ". **–ಯೋಹಾನ 10:9,11**

"ನಾನೇ ಮಾರ್ಗವೂ ಸತ್ಯವೂ ಜೀವವೂ ಆಗಿದ್ದೇನೆ; ನನ್ನ ಮೂಲಕವಾಗಿ ಹೊರತು ಯಾರೂ ತಂದೆಯ ಬಳಿಗೆ ಬರುವದಿಲ್ಲ".**–ಯೋಹಾನ 14:6b**

"ನಾನೇ ಲೋಕಕ್ಕೆ ಬೆಳಕು; ನನ್ನನ್ನು ಅನುಸರಿಸುವವನು ಕತ್ತಲೆಯಲ್ಲಿ ನಡೆಯದೆ ಜೀವಕೊಡುವ ಬೆಳಕನ್ನು ಹೊಂದಿದವನಾಗಿರುವನು" ಎಂದು ಹೇಳಿದನು. **–ಯೋಹಾನ 8:12b**

"ನಾನೇ ಪುನರುತ್ಥಾನವೂ ಜೀವವೂ ಆಗಿದ್ದೇನೆ; ನನ್ನನ್ನು ನಂಬುವವನು ಸತ್ತರೂ ಬದುಕುವನು".
**–ಯೋಹಾನ 11:25b**

"ನೀವು ನನ್ನನ್ನು ಗುರುವೆಂದೂ ಕರ್ತನೆಂದೂ ಕರೆಯುತ್ತೀರಿ; ನೀವು ಕರೆಯುವದು ಸರಿ; ನಾನು ಅಂಥವನೇ ಹೌದು". **–ಯೋಹಾನ 13:13**

ಆಗ ಎಲ್ಲರು–"ಹಾಗಾದರೆ ನೀನು ದೇವ ಕುಮಾರನೋ" ಎಂದು ಕೇಳಲು ಆತನು ಅವರಿಗೆ "ನನ್ನನ್ನು ಅವನೇ ಎಂದು ನೀವೇ ಹೇಳುತ್ತೀರಿ" ಎಂದು ಹೇಳಿದನು. **–ಲೂಕ 22:70**

# ಯೇಸುವಿಗೆ ರೋಗದ ಮೇಲೆ ಅಧಿಕಾರವಿದೆ

ಒಬ್ಬ ಕುಷ್ಠರೋಗಿಯು ಯೇಸುವಿನ ಬಳಿಗೆ ಬಂದು ಆತನಿಗೆ ಅಡ್ಡಬಿದ್ದು–"ಸ್ವಾಮಿ, ನಿನಗೆ ಮನಸ್ಸಿದ್ದರೆ ನನ್ನನ್ನು ಶುದ್ಧಮಾಡಬಲ್ಲೆ" ಅಂದನು. ಆತನು ಕೈ ನೀಡಿ ಅವನನ್ನು ಮುಟ್ಟಿ–"ನನಗೆ ಮನಸ್ಸುಂಟು ಶುದ್ಧವಾಗು" ಅಂದನು.

–ಮತ್ತಾಯ 8:2–3

ಅಲ್ಲಿ ಹದಿನೆಂಟು ವರುಷಗಳಿಂದ ದೆವ್ವ ಬಡಿದು ಮೈಯಲ್ಲಿ ರೋಗವುಳ್ಳ ಒಬ್ಬ ಸ್ತ್ರೀಯು ಇದ್ದಳು. ಆಕೆಯು ನಡುಬೊಗ್ಗಿಹೋಗಿ ಸ್ವಲ್ಪವಾದರೂ ಮೈಯನ್ನು ಮೇಲಕ್ಕೆ ಎತ್ತಲಾರದೆ ಇದ್ದಳು. ಯೇಸು ಆಕೆಯನ್ನು ನೋಡಿ ಹತ್ತರಕ್ಕೆ ಕರೆದು ಆಕೆಗೆ "ಅಮ್ಮಾ, ನಿನಗೆ ರೋಗ ಬಿಡುಗಡೆಯಾಯಿತು" ಎಂದು ಹೇಳಿ ಆಕೆಯ ಮೇಲೆ ತನ್ನ ಕೈಗಳನ್ನಿಟ್ಟನು; ಇಟ್ಟ ಕೂಡಲೆ ಆಕೆ ನೆಟ್ಟಗಾದಳು, ದೇವರನ್ನು ಕೊಂಡಾಡಿದಳು. –ಲೂಕ 13:11–13

ಆಗ ಜನರು ಗುಂಪುಗುಂಪಾಗಿ ಆತನ ಬಳಿಗೆ ಬಂದು ಕುಂಟರು ಕುರುಡರು ಮೂಕರು ಕೈಕಾಲಿಲ್ಲದವರು ಈ ಮುಂತಾದ ಅನೇಕರನ್ನು ಕರೆತಂದು ಅವರನ್ನು ಆತನ ಪಾದಗಳ ಬಳಿಯಲ್ಲಿ ಬಿಟ್ಟರು; ಆತನು ಅವರನ್ನು ವಾಸಿಮಾಡಿದನು.

–ಮತ್ತಾಯ 15:30

ಅಲ್ಲಿ ಸೀಮೋನನ ಅತ್ತೆ ಜ್ವರ ಬಂದು ಮಲಗಿರಲಾಗಿ ಅವರು ಆಕೆಯ ಸಂಗತಿಯನ್ನು ಆತನಿಗೆ ತಿಳಿಸಿದರು. ಆತನು ಹತ್ತರಕ್ಕೆ ಬಂದು ಆಕೆಯ ಕೈಯನ್ನು ಹಿಡಿದು ಎಬ್ಬಿಸಲು ಜ್ವರವು ಆಕೆಯನ್ನು ಬಿಟ್ಟು ಹೋಯಿತು; ಆಕೆಯು ಅವರಿಗೆ ಉಪಚಾರ ಮಾಡಿದಳು.

–ಮಾರ್ಕ 1:30–31

ಮತ್ತು ಜನರಿಗೆ ಹುಲ್ಲಿನ ಮೇಲೆ ಕೂತುಕೊಳ್ಳುವದಕ್ಕೆ ಹೇಳಿ ಆ ಐದು ರೊಟ್ಟಿ ಎರಡು ಮೀನುಗಳನ್ನು ತಕ್ಕೊಂಡು ಆಕಾಶದ ಕಡೆಗೆ ನೋಡಿ ದೇವರ ಸ್ತೋತ್ರ ಮಾಡಿ ರೊಟ್ಟಿಗಳನ್ನು ಮುರಿದು ಶಿಷ್ಯರ ಕೈಗೆ ಕೊಟ್ಟನು; ಶಿಷ್ಯರು ಜನರ ಗುಂಪಿಗೆ ಕೊಟ್ಟರು. ಅವರೆಲ್ಲರೂ ಊಟ ಮಾಡಿ ತೃಪ್ತರಾದರು. ಮಿಕ್ಕ ತುಂಡುಗಳನ್ನು ಕೂಡಿಸಲಾಗಿ ಹನ್ನೆರಡು ಪುಟ್ಟಿ ತುಂಬಿತು. ಊಟ ಮಾಡಿದವರು ಹೆಂಗಸರೂ ಮಕ್ಕಳೂ ಅಲ್ಲದೆ ಗಂಡಸರೇ ಹೆಚ್ಚು ಕಡಿಮೆ ಐದು ಸಾವಿರ ಮಂದಿ. –ಮತ್ತಾಯ 14:19–21

ರಾತ್ರಿಯ ನಾಲ್ಕನೆಯ ಜಾವದಲ್ಲಿ ಯೇಸು ಸಮುದ್ರದ ಮೇಲೆ ನಡೆದು ಅವರ ಕಡೆಗೆ ಬಂದನು. ಸಮುದ್ರದ ಮೇಲೆ ನಡೆಯುವ ಆತನನ್ನು ಶಿಷ್ಯರು ನೋಡಿ ಭೂತವೆಂದು ತತ್ತರಿಸಿ ಭಯದಿಂದ ಕೂಗಿದರು. ಕೂಡಲೆ ಯೇಸು ಮಾತಾಡಿ ಅವರಿಗೆ "ಧೈರ್ಯವಾಗಿರಿ; ನಾನು; ಅಂಜಬೇಡಿರಿ" ಎಂದು ಹೇಳಿದನು.

–ಮತ್ತಾಯ 14:25–27

ತರುವಾಯ ದೊಡ್ಡ ಬಿರುಗಾಳಿ ಎದ್ದು ತೆರೆಗಳು ಆ ದೋಣಿಗೆ ಬಡಿದು ಒಳಗೆ ನುಗ್ಗಿದ್ದರಿಂದ ಆ ದೋಣಿ ಆಗಲೇ ತುಂಬುವದಕ್ಕೆ ಬಂದಿತ್ತು. ಆತನು ದೋಣಿಯ ಹಿಂಭಾಗದಲ್ಲಿ ತಲೆಗಿಂಬನ್ನು ಒರಗಿ ನಿದ್ದೆ ಮಾಡುತ್ತಿದ್ದನು. ಅವರು ಆತನನ್ನು ಎಬ್ಬಿಸಿ–"ಗುರುವೇ ನಾವು ಮುಳುಗಿ ಹೋಗುವದರಲ್ಲಿ ನಿನಗೆ ಚಿಂತೆಯಿಲ್ಲವೇ" ಎಂದು ಕೇಳಲು ಆತನು ಎದ್ದು ಗಾಳಿಯನ್ನು ಗದರಿಸಿ ಸಮುದ್ರಕ್ಕೆ – "ಸುಮ್ಮನಿರು, ಮೊರೆಯಬೇಡ" ಎಂದು ಅಪ್ಪಣೆಕೊಟ್ಟನು. ಕೊಡುತ್ತಲೆ ಗಾಳಿ ನಿಂತು ಹೋಗಿ ಎಲ್ಲಾ ಶಾಂತವಾಯಿತು.

–ಮಾರ್ಕ 4:37–39

# ಪಾಪಗಳನ್ನು ಕ್ಷಮಿಸಲು ಯೇಸುವಿಗೆ ಅಧಿಕಾರವಿದೆ

"ಆದರೆ ಪಾಪಗಳನ್ನು ಕ್ಷಮಿಸಿಬಿಡುವದಕ್ಕೆ ಮನುಷ್ಯ ಕುಮಾರನಿಗೆ ಭೂಲೋಕದಲ್ಲಿ ಅಧಿಕಾರ ಉಂಟೆಂಬುದು ನಿಮಗೆ ತಿಳಿಯಬೇಕು" ಎಂದು ಹೇಳಿ ಪಾರ್ಶ್ವವಾಯು ರೋಗಿಯನ್ನು ನೋಡಿ–"ಎದ್ದು ನಿನ್ನ ಹಾಸಿಗೆಯನ್ನು ಎತ್ತಿಕೊಂಡು ಮನೆಗೆ ಹೋಗು" ಅಂದನು. ಅವನು ಎದ್ದು ಮನೆಗೆ ಹೋದನು.

–ಮತ್ತಾಯ 9:6–7

ಆಮೇಲೆ ಆತನು ಅವಳಿಗೆ – "ನಿನ್ನ ಪಾಪಗಳು ಕ್ಷಮಿಸಲ್ಪಟ್ಟಿವೆ" ಎಂದು ಹೇಳಿದನು. ಆತನ ಸಂಗಡ ಊಟಕ್ಕೆ ಒರಗಿಕೊಂಡವರು–"ಪಾಪಗಳನ್ನು ಸಹ ಕ್ಷಮಿಸಿಬಿಡುವವನು ಇವನಾರು" ಎಂದು ತಮ್ಮ ತಮ್ಮೊಳಗೆ ಅಂದುಕೊಂಡರು. –ಲೂಕ 7:48–49

"ಆದದರಿಂದ ಸಹೋದರರೇ, ಆತನ ಮೂಲಕ ವಾಗಿ ಪಾಪಪರಿಹಾರವು ದೊರೆಯುತ್ತದೆಂಬುದು ನಿಮಗೆ ಸಾರೋಣವಾಗುತ್ತದೆಂದು ನಿಮಗೆ ತಿಳಿದಿರಲಿ. ಮೋಶೆಯ ಧರ್ಮಶಾಸ್ತ್ರದ ಮೂಲಕ ನೀವು ಬಿಡುಗಡೆ ಹೊಂದಲಾಗದ ಎಲ್ಲಾ ಪಾಪಗಳಿಂದ ನಂಬುವವರೆಲ್ಲರು ಆತನ ಮೂಲಕ ವಾಗಿ ಬಿಡುಗಡೆ ಹೊಂದಿ ನೀತಿವಂತರೆನಿಸಿಕೊಳ್ಳುತ್ತಾರೆ".

–ಲೂಕ 13:38–39

ಈತನು ನಮಗೋಸ್ಕರ ತನ್ನ ರಕ್ತವನ್ನು ಸುರಿಸಿದ್ದರಿಂದ ನಮ್ಮ ಅಪರಾಧಗಳು ಪರಿಹಾರವಾಗಿ ನಮಗೆ ಬಿಡುಗಡೆಯಾಯಿತು. ಇದು ದೇವರ ಕೃಪಾತಿಶಯವೇ.

–ಎಫೆಸ 1:7

ನಮ್ಮ ಪಾಪಗಳ್ನು ಒಪ್ಪಿಕೊಂಡು ಅರಿಕೆ ಮಾಡಿದರೆ ಆತನು ನಂಬಿಗಸ್ತನೂ ನೀತಿವಂತನೂ ಆಗಿರುವದರಿಂದ ನಮ್ಮ ಪಾಪಗಳನ್ನು ಕ್ಷಮಿಸಿಬಿಟ್ಟು ಸಕಲ ಅನೀತಿಯನ್ನು ಪರಿಹರಿಸಿ ನಮ್ಮನ್ನು ಶುದ್ಧಿಮಾಡುವನು.

–1 ಯೋಹಾನ 1:9

ಆ ಸಭಾಮಂದಿರದಲ್ಲಿ ದೆವ್ವ ಹಿಡಿದ ಒಬ್ಬ ಮನುಷ್ಯನಿದ್ದನು. ಆ ದೆವ್ವವು–"ಹಾ! ನಜರೇತಿನ ಯೇಸುವೇ, ನಮ್ಮ ಗೊಡವೆ ನಿನಗೇಕೆ? ನಮ್ಮನ್ನು ನಾಶಮಾಡುವದಕ್ಕೆ ಬಂದೆಯಾ? ನಿನ್ನನ್ನು ಬಲ್ಲೆನು. ನೀನು ದೇವರು ಪ್ರತಿಷ್ಠಿಸಿದವನೇ" ಎಂದು ಅಬ್ಬರಿಸಿ ಹೇಳಿತು. ಯೇಸು ಅದನ್ನು ಗದರಿಸಿ–"ಸುಮ್ಮನಿರು, ಇವನನ್ನು ಬಿಟ್ಟು ಹೋಗು" ಎನ್ನಲಾಗಿ ಆ ದೆವ್ವವು ಅವನನ್ನು ನಡುವೆ ಕೆಡವಿ ಅವನಿಗೆ ಯಾವ ಕೇಡನ್ನೂ ಮಾಡದೆ ಬಿಟ್ಟು ಹೋಯಿತು. ಅದಕ್ಕೆ ಎಲ್ಲರು ಬೆರಗಾಗಿ–"ಇದೆಂಥ ಮಾತಾಗಿರಬಹುದು? ಈತನು ಅಧಿಕಾರದಿಂದಲೂ ಬಲದಿಂದಲೂ ದೆವ್ವಗಳಿಗೆ ಅಪ್ಪಣೆ ಕೊಡುತ್ತಾನೆ, ಅವು ಬಿಟ್ಟು ಹೋಗುತ್ತವೆ" ಎಂದು ತಮ್ಮತಮ್ಮೊಳಗೆ ಮಾತಾಡಿಕೊಂಡರು.

**–ಲೂಕ 4:33–36**

ಆ ಹುಡುಗನು ಇನ್ನೂ ಬರುತ್ತಿರುವಾಗ ಆ ದೆವ್ವವು ಅವನನ್ನು ನೆಲಕ್ಕೆ ಅಪ್ಪಳಿಸಿ ಬಹಳವಾಗಿ ಒದ್ದಾಡಿಸಿತು. ಆದರೆ ಯೇಸು ಆ ದೆವ್ವವನ್ನು ಗದರಿಸಿ ಆ ಹುಡುಗನಿಗೆ ವಾಸಿ ಮಾಡಿ ಅವನ ತಂದೆಯ ಕೈಗೆ ಕೊಟ್ಟನು. ಅದನ್ನು ನೋಡಿ ಎಲ್ಲರು ದೇವರ ಮಹತ್ವಕ್ಕೆ ಬೆರಗಾದರು.

**–ಲೂಕ 9:42–43a**

"ದೇವರು ನಜರೇತಿನ ಯೇಸುವನ್ನು ಪವಿತ್ರಾತ್ಮದಿಂದಲೂ ಬಲದಿಂದಲೂ ಅಭಿಷೇಕಿಸಿದನು; ದೇವರು ಆತನ ಸಂಗಡ ಇದ್ದದರಿಂದ ಆತನು ಉಪಕಾರಗಳನ್ನು ಮಾಡುತ್ತಾ ಸೈತಾನನಿಂದ ಬಾಧಿಸಲ್ಪಡುತ್ತಿರುವವರೆಲ್ಲರನ್ನು ಗುಣಮಾಡುತ್ತಾ ಸಂಚರಿಸಿದನು".

**–ಅಪೊ 10:38a**

# ಯೇಸುವಿಗೆ ಮರಣದ ಮೇಲೆ ಅಧಿಕಾರವಿದೆ

ಯೇಸು "ಆ ಕಲ್ಲನ್ನು ತೆಗೆದುಹಾಕಿರಿ" ಅನ್ನಲು ತೀರಿಹೋದವನ ಅಕ್ಕನಾದ ಮಾರ್ಥಳು–"ಸ್ವಾಮಿ, ಅವನು ಸತ್ತು ನಾಲ್ಕು ದಿವಸವಾಯಿತು; ಈಗ ನಾತ ಹುಟ್ಟಿದೆ" ಅಂದಳು. ಯೇಸು ಆಕೆಗೆ – "ನೀನು ನಂಬಿದರೆ ದೇವರ ಮಹಿಮೆಯನ್ನು ಕಾಣುವಿ ಎಂದು ನಾನು ನಿನಗೆ ಹೇಳಲಿಲ್ಲವೇ" ಎಂದು ಉತ್ತರಕೊಟ್ಟನು. ಅದನ್ನು ಹೇಳಿದ ಮೇಲೆ ದೊಡ್ಡ ಶಬ್ದದಿಂದ – "ಲಾಜರನೇ, ಹೊರಗೆ ಬಾ" ಎಂದು ಕೂಗಿದನು. ಸತ್ತಿದ್ದವನು ಹೊರಗೆ ಬಂದನು; ಅವನ ಕೈಕಾಲುಗಳು ಬಟ್ಟೆಗಳಿಂದ ಕಟ್ಟಿದ್ದವು, ಅವನ ಮುಖವು ಕೈಪಾವಡದಿಂದ ಸುತ್ತಿತ್ತು. ಯೇಸು ಅವರಿಗೆ–"ಅವನನ್ನು ಬಿಚ್ಚಿರಿ, ಹೋಗಲಿ" ಎಂದು ಹೇಳಿದನು.

–ಯೋಹಾನ **11:39–40, 43–44**

ಒಬ್ಬ ಅಧಿಕಾರಿ ಬಂದು ಆತನಿಗೆ ಅಡ್ಡಬಿದ್ದು – "ನನ್ನ ಮಗಳು ಈಗಲೇ, ತೀರಿಹೋದಳು; ಆದಾಗ್ಯೂ ನೀನು ಬಂದು ಆಕೆಯ ಮೇಲೆ ಕೈ ಇಟ್ಟರೆ ಬದುಕುವಳು" ಎಂದು ಬೇಡಿಕೊಳ್ಳಲು... ಜನರನ್ನು ಹೊರಕ್ಕೆ ಕಳುಹಿಸಿದ ಮೇಲೆ ಆತನು ಒಳಕ್ಕೆ ಹೋಗಿ ಆಕೆಯ ಕೈ ಹಿಡಿಯಲು ಆಕೆ ಎದ್ದಳು.–ಮತ್ತಾಯ **9:18b,25**

ಆತನು ಊರಬಾಗಲಿನ ಹತ್ತಿರಕ್ಕೆ ಬಂದಾಗ ಸತ್ತು ಹೋಗಿದ್ದ ಒಬ್ಬನನ್ನು ಹೊರಗೆ ತರುತ್ತಿದ್ದರು. ಇವನು ತನ್ನ ತಾಯಿಗೆ ಒಬ್ಬನೇ ಮಗನು; ಆಕೆಯು ಗಂಡ ಸತ್ತವಳಾಗಿದ್ದಳು. ಆಕೆಯ ಸಂಗಡ ಗ್ರಾಮಸ್ಥರು ಅನೇಕರಿದ್ದರು. ಸ್ವಾಮಿಯು ಆಕೆಯನ್ನು ಕಂಡು ಕನಿಕರಿಸಿ– "ಅಳಬೇಡ" ಎಂದು ಆಕೆಗೆ ಹೇಳಿ ಚಟ್ಟದ ಹತ್ತಿರಕ್ಕೆ ಹೋಗಿ ಅದನ್ನು ಮುಟ್ಟಲು ಹೊತ್ತುಕೊಂಡವರು ನಿಂತರು. ಆಗ ಆತನು– "ಯೌವನಸ್ಥನೇ, ಏಳು" ಎಂದು ನಿನಗೆ ಹೇಳುತ್ತೇನೆ ಅಂದನು. ಅನ್ನುತ್ತಲೇ ಸತ್ತಿದ್ದವನು ಎದ್ದು ಕೂತುಕೊಂಡು ಮಾತಾಡುವದಕ್ಕೆ ತೊಡಗಿದನು.–ಲೂಕ **7:12–15a**

ಜನರು ಮನುಷ್ಯಕುಮಾರನೆಂಬ ನನ್ನನ್ನು ಯಾರು ಅನ್ನುತ್ತಾರೆ ಎಂದು ತನ್ನ ಶಿಷ್ಯರನ್ನು ಕೇಳಿದ್ದಕ್ಕೆ ಅವರು–ನಿನ್ನನ್ನು ಕೆಲವರು ಸ್ನಾನಿಕನಾದ ಯೋಹಾನನು ಅನ್ನುತ್ತಾರೆ, ಕೆಲವರು ಎಲೀಯನು ಅನ್ನುತ್ತಾರೆ, ಬೇರೆ ಕೆಲವರು ಯೆರೆಮೀಯನು, ಇಲ್ಲವೆ ಪ್ರವಾದಿಗಳಲ್ಲಿ ಒಬ್ಬನು ಅನ್ನುತ್ತಾರೆ ಎಂದು ಹೇಳಿದರು. ಆತನು ಅವರನ್ನು–"ಆದರೆ ನೀವು ನನ್ನನ್ನು ಯಾರನ್ನುತ್ತೀರಿ" ಎಂದು ಕೇಳಲಾಗಿ ಸೀಮೋನ್ ಪೇತ್ರನು–"ನೀನು ಬರಬೇಕಾಗಿರುವ ಕ್ರಿಸ್ತನು, ಜೀವಸ್ವರೂಪನಾದ ದೇವರ ಕುಮಾರನು" ಎಂದು ಉತ್ತರ ಕೊಟ್ಟನು. ಅದಕ್ಕೆ ಯೇಸು–"ಯೋನನ ಮಗನಾದ ಸೀಮೋನನೇ, ನೀನು ಧನ್ಯನು; ಈ ಗುಟ್ಟು ನಿನಗೆ ತಿಳಿಸಿದವನು ನರಮನುಷ್ಯನಲ್ಲ, ಪರಲೋಕದಲ್ಲಿರುವ ನನ್ನ ತಂದೆಯೇ ತಿಳಿಸಿದನು". **–ಮತ್ತಾಯ 16:13b–17**

ಅವರಲ್ಲಿ ಅನೇಕರು–"ಅವನಿಗೆ ದೆವ್ವ ಹಿಡಿದದೆ, ಹುಚ್ಚು ಹಿಡಿದದೆ, ಯಾಕೆ ಅವನ ಮಾತು ಕೇಳುತ್ತೀರಿ?" ಅಂದರು. ಮತ್ತು ಕೆಲವರು–"ಇವು ದೆವ್ವಹಿಡಿದವನ ಮಾತುಗಳಲ್ಲ; ದೆವ್ವವು ಕುರುಡರಿಗೆ ಕಣ್ಣು ಕೊಡಬಲ್ಲದೇ?" ಅಂದರು.**–ಯೋಹಾನ 10:20–21**

ಮರಿಯಳ ಬಳಿಗೆ ಬಂದ ಯೆಹೂದ್ಯರು ಆತನು ಮಾಡಿದ ಕಾರ್ಯವನ್ನು ನೋಡಿದಾಗ ಅವರಲ್ಲಿ ಅನೇಕರು ಆತನನ್ನು ನಂಬಿದರು; ಆದರೆ ಕೆಲವರು ಫರಿಸಾಯರ ಬಳಿಗೆ ಹೋಗಿ ಯೇಸು ಮಾಡಿದ್ದನ್ನು ಅವರಿಗೆ ತಿಳಿಸಿದರು. ಆ ದಿನದಿಂದ ಆತನನ್ನು ಕೊಲ್ಲುವದಕ್ಕೆ ಆಲೋಚಿಸುತ್ತಿದ್ದರು.

**–ಯೋಹಾನ 11:45–46,53**

"ಅವರು ನನ್ನನ್ನು ನಿಷ್ಕಾರಣವಾಗಿ ದ್ವೇಷಿಸಿದರು".

**–ಯೋಹಾನ 15:25a**

# ಯೇಸು ತನ್ನ ಮರಣ ಮತ್ತು ಪುನರುತ್ಥಾನದ ಕುರಿತು ಪ್ರತಿಪಾದಿಸಿದನು

ಇದಲ್ಲದೆ ಆತನು – ಮನುಷ್ಯಕುಮಾರನು ಬಹು ಕಷ್ಟಗಳನ್ನನುಭವಿಸಿ ಹಿರಿಯರಿಂದಲೂ ಮಹಾಯಾಜಕರಿಂದಲೂ ಶಾಸ್ತ್ರಿಗಳಿಂದಲೂ ನಿರಾಕೃತನಾಗಿ ಕೊಲ್ಲಲ್ಪಟ್ಟು ಮೂರು ದಿನದ ಮೇಲೆ ಜೀವಿತನಾಗಿ ಎದ್ದು ಬರ ಬೇಕಾಗಿದೆ ಎಂದು ಉಪದೇಶ ಮಾಡುವದಕ್ಕೆ ಪ್ರಾರಂಭ ಮಾಡಿದನು.

–ಮಾರ್ಕ 8:31

“ಆದರೆ ನಾನು ಭೂಮಿಯಲ್ಲಿಂದ ಮೇಲಕ್ಕೆ ಎತ್ತಲ್ಪಟ್ಟಾಗ ಎಲ್ಲರನ್ನೂ ನನ್ನ ಬಳಿಗೆ ಎಳಕೊಳ್ಳುವೆನು” ಎಂದು ಹೇಳಿದನು. ಈ ಮಾತಿನಿಂದ ತಾನು ಇಂಥ ಸಾವು ಸಾಯತಕ್ಕವನೆಂದು ಸೂಚಿಸಿದನು.

–ಯೋಹಾನ 12:32–33

ಯೇಸು–“ಈ ದೇವಾಲಯವನ್ನು ಕೆಡವಿರಿ; ನಾನು ಮೂರು ದಿನದಲ್ಲಿ ಅದನ್ನು ಎಬ್ಬಿಸುವೆನು” ಅಂದನು. ಅದಕ್ಕೆ ಯೆಹೂದ್ಯರು–“ಈ ದೇವಾಲಯವನ್ನು ಕಟ್ಟುವದಕ್ಕೆ ನಾಲ್ವತ್ತಾರು ವರುಷ ಹಿಡಿಯಿತು. ನೀನು ಮೂರು ದಿನದಲ್ಲಿ ಅದನ್ನು ಎಬ್ಬಿಸುವಿಯೋ?” ಅಂದರು. ಆದರೆ ಆತನು ತನ್ನ ದೇಹವೆಂಬ ದೇವಾಲಯದ ವಿಷಯವಾಗಿ ಆ ಮಾತನ್ನು ಹೇಳಿದ್ದನು. ಆದದರಿಂದ ಆತನು ಸತ್ತು ಬದುಕಿ ಎದ್ದ ಮೇಲೆ ಆ ಮಾತು ಆತನ ಶಿಷ್ಯರ ನೆನಪಿಗೆ ಬಂದು...

–ಯೋಹಾನ 2:19–22a

“ಅಂದರೆ ಯೋನನು ಹೇಗೆ ಮೂರು ದಿನ ರಾತ್ರಿ ಹಗಲು ದೊಡ್ಡ ಮೀನಿನ ಹೊಟ್ಟೆಯೊಳಗೆ ಇದ್ದನೋ, ಹಾಗೆಯೇ ಮನುಷ್ಯಕುಮಾರನು ಮೂರು ದಿನ ರಾತ್ರಿ ಹಗಲು ಭೂಗರ್ಭದೊಳಗೆ ಇರುವನು”.

–ಮತ್ತಾಯ 12:40

“ಆದರೆ ನಾನು ಜೀವಿತನಾಗಿ ಎದ್ದ ಮೇಲೆ ನಿಮ್ಮ ಮುಂದೆ ಗಲಿಲಾಯಕ್ಕೆ ಹೋಗುವೆನು” ಎಂದು ಹೇಳಿದನು.

–ಮತ್ತಾಯ 26:32

ಮರುದಿವಸ ಜಾತ್ರೆಗೆ ಬಂದಿದ್ದ ಜನಸಮೂಹವು ಯೇಸು ಯೆರೂಸಲೇಮಿಗೆ ಬರುತ್ತಾನೆಂದು ಕೇಳಿ ಖರ್ಜೂರದ ಗರಿಗಳನ್ನು ತಕ್ಕೊಂಡು ಆತನನ್ನು ಎದುರುಗೊಳ್ಳುವದಕ್ಕೆ ಹೊರಗೆ ಬಂದು–"ಜಯ, ಕರ್ತನ ಹೆಸರಿನಲ್ಲಿ ಬರುವವನಿಗೆ ಆಶೀರ್ವಾದ; ಇಸ್ರಾಯೇಲಿನ ಅರಸನಿಗೆ ಆಶೀರ್ವಾದ" ಎಂದು ಆರ್ಭಟಿಸಿದರು ಮತ್ತು ಯೇಸು ಕತ್ತೆಮರಿಯನ್ನು ತರಿಸಿಕೊಂಡು ಅದರ ಮೇಲೆ ಕೂತುಕೊಂಡನು. ಇದರಿಂದ "ಚೀಯೋನ್ ನಗರಿಯೇ, ಹೆದರಬೇಡ; ಇಗೋ, ನಿನ್ನ ಅರಸನು ಕತ್ತೆಮರಿಯ ಮೇಲೆ ಕೂತುಕೊಂಡು ಬರುತ್ತಾನೆ" ಎಂಬ ಶಾಸ್ತ್ರದ ಮಾತು ನೆರವೇರಿತು. –ಯೋಹಾನ 12:12–15

ಆತನು ಯೆರೂಸಲೇಮನ್ನು ಪ್ರವೇಶಿಸಿದಾಗ ಜನಸಮೂಹವು ಬಹಳ ಸಂಭ್ರಮದಿಂದ ಆತನನ್ನು ಸ್ವೀಕರಿಸಿದರೂ, ತನ್ನ ಜನರು ತನ್ನನ್ನು ರಾಜನೆಂದು ಒಪ್ಪಿಕೊಳ್ಳದೆ ತಿರಸ್ಕರಿಸುತ್ತಾರೆಂದು ಯೇಸುವಿಗೆ ತಿಳಿದಿತ್ತು. ತಮಗೆ ಸಮಾಧಾನ ತರಲು ಯೋಗ್ಯನಾದ ಒಬ್ಬನೇ ಒಬ್ಬ ವ್ಯಕ್ತಿಯನ್ನು ಸ್ವೀಕರಿಸದೆ ಇದ್ದದ್ದರಿಂದ ಯೆರೂಸಲೇಮಿಗೆ ಸಂಭವಿಸಲಿರುವ ಸಂಗತಿಯನ್ನು ನೆನಸಿ ಆತನು ಅತ್ತನು.

ತರುವಾಯ ಆತನು ಸಮೀಪಕ್ಕೆ ಬಂದಾಗ ಪಟ್ಟಣವನ್ನು ನೋಡಿ ಅದರ ವಿಷಯವಾಗಿ ಅತ್ತು–"ನೀನಾದರೂ ಸಮಾಧಾನಕ್ಕೆ ಬೇಕಾದದ್ದನ್ನು ಇದೇ ದಿನದಲ್ಲಿ ತಿಳಿದುಕೊಂಡರೆ ಎಷ್ಟೋ ಒಳ್ಳೇದು. ಆದರೆ ಈಗ ಅದು ನಿನ್ನ ಕಣ್ಣಿಗೆ ಮರೆಯಾಗಿದೆ. ದೇವರು ನಿನಗೆ ದರ್ಶನಕೊಟ್ಟ ಸಮಯವನ್ನು ನೀನು ತಿಳುಕೊಳ್ಳಲಿಲ್ಲ ವಾದದರಿಂದ ನಿನ್ನ ವೈರಿಗಳು ಒಡ್ಡುಕಟ್ಟಿ ನಿನ್ನ ಸುತ್ತಲೂ ಮುತ್ತಿಗೆ ಹಾಕಿ ಎಲ್ಲಾ ಕಡೆಗಳಲ್ಲಿಯೂ ನಿನ್ನನ್ನು ಬಂದು ಮಾಡಿ ನಿನ್ನನ್ನೂ ನಿನ್ನೊಳಗಿರುವ ನಿನ್ನ ಜನರನ್ನೂ ನಿರ್ಮೂಲ ಮಾಡಿ ನಿನ್ನಲ್ಲಿ ಕಲ್ಲಿನ ಮೇಲೆ ಕಲ್ಲು ನಿಲ್ಲದಂತೆ ಮಾಡುವ ದಿವಸಗಳು ನಿನ್ನ ಮೇಲೆ ಬರುವವು" ಅಂದನು. –ಲೂಕ 19:41–44

# ಯೇಸು, ಪಸ್ಕದ ಕುರಿಮರಿ

ಯೋಹಾನನು ತನ್ನ ಕಡೆಗೆ ಬರುವ ಯೇಸುವನ್ನು ನೋಡಿ–"ಅಗೋ, ಯಜ್ಞಕ್ಕೆ ದೇವರು ನೇಮಿಸಿದ ಕುರಿ, ಲೋಕದ ಪಾಪವನ್ನು ನಿವಾರಣೆ ಮಾಡುವವನು"

–ಯೋಹಾನ 1:29

ಹುಳಿಯಿಲ್ಲದ ರೊಟ್ಟಿಯನ್ನು ತಿನ್ನುವ ದಿವಸಗಳಲ್ಲಿ ಪಸ್ಕದ ಕುರಿಮರಿಯನ್ನು ಕೊಯ್ಯತಕ್ಕ ದಿವಸ ಬಂದಾಗ ಯೇಸು ಪೇತ್ರನಿಗೂ ಯೋಹಾನನಿಗೂ–"ನೀವು ಹೋಗಿ ನಾವು ಪಸ್ಕದ ಊಟಮಾಡುವಂತೆ ಸಿದ್ಧಮಾಡಿರಿ" ಎಂದು ಹೇಳಿ ಅವರನ್ನು ಕಳುಹಿಸಿದನು. ಬಳಿಕ ಆತನು ರೊಟ್ಟಿಯನ್ನು ತೆಗೆದುಕೊಂಡು ಸ್ತೋತ್ರಮಾಡಿ ಮುರಿದು ಅವರಿಗೆ ಕೊಟ್ಟು–"ಇದು ನಿಮಗೋಸ್ಕರ ಕೊಟ್ಟಿರುವ ನನ್ನ ದೇಹ; ನನ್ನನ್ನು ನೆನಸಿಕೊಳ್ಳುವದಕ್ಕೋಸ್ಕರ ಹೀಗೆ ಮಾಡಿರಿ" ಅಂದನು. ಆಮೇಲೆ ಪಾತ್ರೆಯನ್ನು ತೆಗೆದುಕೊಂಡು... ಅವರಿಗೆ–"ಇದು ನನ್ನ ರಕ್ತ, ಇದು ಒಡಂಬಡಿಕೆಯ ರಕ್ತ; ಇದು ಬಹು ಜನರಿಗೋಸ್ಕರ ಸುರಿಸಲ್ಪಡುವ ರಕ್ತ".

–ಲೂಕ22:7–8,19; ಮಾರ್ಕ14:23–24

ಅವನು ಬಾಧೆಗೆ ಒಳಗಾಗಿ ತನ್ನನ್ನು ತಗ್ಗಿಸಿಕೊಂಡನು, ಬಾಯಿ ತೆರೆಯಲಿಲ್ಲ; ವಧ್ಯಸ್ಥಾನಕ್ಕೆ ಒಯ್ಯಲ್ಪಡುವ ಕುರಿಯಂತೆಯೂ... –ಯೆಶಾ 53:7a

ಯಾಕಂದರೆ ನಮ್ಮ ಪಸ್ಕದ ಯಜ್ಞದ ಕುರಿಯು ಕೊಯಿದದೆ; ಅದಾವದಂದರೆ ಕ್ರಿಸ್ತನೇ.

–ಕೊರಿಂಥ 5:7:b

ನಿಮಗೆ ಬಿಡುಗಡೆಯಾದದ್ದು ಬೆಳ್ಳಿ, ಬಂಗಾರ ಮೊದಲಾದ ನಶಿಸಿ ಹೋಗುವ ವಸ್ತುಗಳಿಂದಲ್ಲ, ಪೂರ್ಣಾಂಗವಾದ ನಿಷ್ಕಳಂಕ ಯಜ್ಞದ ಕುರಿಯ ರಕ್ತದಿಂದಲೋ ಎಂಬಂತೆ ಕ್ರಿಸ್ತನ ಅಮೂಲ್ಯವಾದ ರಕ್ತದಿಂದಲೇ ಎಂದು ಬಲ್ಲಿರಲ್ಲವೆ.

–1ಪೇತ್ರ 1:18–19

ಆಮೇಲೆ ಹನ್ನೆರಡು ಮಂದಿ ಶಿಷ್ಯರಲ್ಲಿ ಒಬ್ಬನಾದ ಇಸ್ಕರಿಯೋತ ಯೂದನು ಯೇಸುವನ್ನು ಮಹಾಯಾಜಕರಿಗೆ ಹಿಡುಕೊಡಬೇಕಂತ ಅವರ ಬಳಿಗೆ ಹೋದನು. ಅವರು ಕೇಳಿ ಸಂತೋಷಪಟ್ಟು–ನಿನಗೆ ಹಣ ಕೊಡುತ್ತೇವೆಂದು ಮಾತುಕೊಟ್ಟರು.

–ಮಾರ್ಕ 14:10–11a

ಅನಂತರ ಯೇಸು ತನ್ನ ಶಿಷ್ಯರ ಸಂಗಡ ಗೆತ್ಸೇಮನೆ ಎಂಬ ತೋಟಕ್ಕೆ ಬಂದು ಅವರಿಗೆ–"ಇಲ್ಲೇ ಕೂತುಕೊಳ್ಳಿರಿ, ನಾನು ಅತ್ತಲಾಗಿ ಹೋಗಿ ಪ್ರಾರ್ಥನೆ ಮಾಡಿ ಬರುತ್ತೇನೆ" ಎಂದು ಹೇಳಿ ಪೇತ್ರನನ್ನೂ ಜೆಬೆದಾಯನ ಇಬ್ಬರು ಮಕ್ಕಳನ್ನೂ ಕರಕೊಂಡು ಹೋಗಿ ದುಃಖಪಟ್ಟು ಮನಗುಂದಿದವನಾದನು. ಸ್ವಲ್ಪ ಮುಂದೆ ಹೋಗಿ ಬೋರಲಬಿದ್ದು–"ನನ್ನ ತಂದೆಯೇ, ಸಾಧ್ಯವಾಗಿದ್ದರೆ ಈ ಪಾತ್ರೆಯು ನನ್ನನ್ನು ಬಿಟ್ಟು ಹೋಗಲಿ; ಹೇಗೂ ನನ್ನ ಚಿತ್ತದಂತಾಗದೆ ನಿನ್ನ ಚಿತ್ತದಂತೆಯೇ ಆಗಲಿ" ಎಂದು ದೇವರನ್ನು ಪ್ರಾರ್ಥಿಸಿದನು. –ಮತ್ತಾಯ 26:36–37,39

ಹೀಗಿರಲಾಗಿ ಯೂದನು ಸಿಪಾಯಿಗಳ ಪಟಾಲಮನ್ನೂ, ಮಹಾಯಾಜಕರು ಮತ್ತು ಫರಿಸಾಯರು ಕೊಟ್ಟ ಓಲೇಕಾರರನ್ನೂ ಕರಕೊಂಡು ದೀವಿಟಿಗಳನ್ನೂ, ಪಂಜುಗಳನ್ನೂ ಆಯುಧಗಳನ್ನೂ ಹಿಡಿಸಿಕೊಂಡು ಅಲ್ಲಿಗೆ ಬಂದನು. ಆಮೇಲೆ ಆ ಸಿಪಾಯಿಗಳೂ ಸಹಸ್ರಾಧಿಪತಿಯೂ ಯೆಹೂದ್ಯರ ಓಲೇಕಾರರೂ ಯೇಸುವನ್ನು ಹಿಡುಕೊಂಡು ಕಟ್ಟಿ...

–ಯೋಹಾನ 18:3,12

ಆಗ ಮಹಾಯಾಜಕರೂ ಹಿರೀಸಭೆಯವರೆಲ್ಲರೂ ಯೇಸುವನ್ನು ಕೊಲ್ಲಿಸಬೇಕೆಂದು ಆತನ ಮೇಲೆ ಸಾಕ್ಷಿಯನ್ನು ಹುಡುಕಿದರು; ಆದರೆ ಏನೂ ಸಿಕ್ಕಲಿಲ್ಲ. ಬಹುಮಂದಿ ಬಂದು ಆತನ ಮೇಲೆ ಸುಳ್ಳುಸಾಕ್ಷಿ ಹೇಳಿದರೂ ಅವರ ಸಾಕ್ಷಿ ಒಂದಕ್ಕೊಂದು ಸರಿಬೀಳಲಿಲ್ಲ. –ಮಾರ್ಕ 14:55–56

# ಯೇಸುವನ್ನು ದೂಷಿಸಿ ಶಿಲುಬೆಗೇರಿಸಿದರು

ಬೆಳಗಾಗಲು ಎಲ್ಲಾ ಮಹಾಯಾಜಕರೂ ಜನರ ಹಿರಿಯರೂ ಯೇಸುವನ್ನು ಕೊಲ್ಲಿಸಬೇಕೆಂದು ಆಲೋಚನೆ ಮಾಡಿಕೊಂಡು ಆತನನ್ನು ಕಟ್ಟಿಸಿ ತೆಗೆದುಕೊಂಡು ಹೋಗಿ ದೇಶಾಧಿಪತಿಯಾದ ಪಿಲಾತನಿಗೆ ಒಪ್ಪಿಸಿದರು. ಪಿಲಾತನು ಅವರನ್ನು– "ಹಾಗಾದರೆ ಕ್ರಿಸ್ತನನ್ನಿಸಿಕೊಳ್ಳುವ ಯೇಸುವನ್ನು ನಾನೇನು ಮಾಡಲಿ" ಎಂದು ಕೇಳಲು ಎಲ್ಲರೂ – "ಅವನನ್ನು ಶಿಲುಬೆಗೆ ಹಾಕಿಸು" ಅಂದರು.

– ಮತ್ತಾಯ 27:1–2,22

ಆತನನ್ನು ಶಿಲುಬೆಗೆ ಹಾಕುವಾಗ ಹೊತ್ತಾರೆ ಒಂಬತ್ತು ಘಂಟೆಯಾಗಿತ್ತು. ಇದಲ್ಲದೆ ಅವರು ಹೊರಿಸಿದ ಅಪರಾಧವನ್ನು ಸೂಚಿಸುವ ಒಂದು ವಿಳಾಸವು ಶಿಲುಬೆಯ ಮೇಲೆ ಬರೆದಿತ್ತು; ಅದೇನಂದರೆ– "ಯೆಹೂದ್ಯರ ಅರಸನು" ಎಂಬುದೇ. ಅದಲ್ಲದೆ ಇಬ್ಬರು ಕಳ್ಳರನ್ನು ತಂದು ಒಬ್ಬನನ್ನು ಆತನ ಬಲಗಡೆಯಲ್ಲಿ ಒಬ್ಬನನ್ನು ಎಡಗಡೆಯಲ್ಲಿ ಆತನ ಸಂಗಡ ಶಿಲುಬೆಗೆ ಹಾಕಿದರು. ಅಲ್ಲಿ ಹಾದು ಹೋಗುವವರು ತಲೇ ಆಡಿಸಿ ಆಹಾ ದೇವಾಲಯವನ್ನು ಕೆಡವಿ ಮೂರು ದಿನದಲ್ಲಿ ಕಟ್ಟುವವನೇ, ಶಿಲುಬೆಯಿಂದ ಇಳಿದು ನಿನ್ನನ್ನು ರಕ್ಷಿಸಿಕೋ ಎಂದು ಆತನನ್ನು ಹಂಗಿಸುತ್ತಿದ್ದರು. ಅದೇ ಮೇರೆಗೆ ಮಹಾಯಾಜಕರೂ ಶಾಸ್ತ್ರಿಗಳೂ – "ಅವನು ಮತ್ತೊಬ್ಬರನ್ನು ರಕ್ಷಿಸಿದನು; ತನ್ನನ್ನು ರಕ್ಷಿಸಿಕೊಳ್ಳಲಾರನು".

– ಮಾರ್ಕ 15:25–31

ಆಮೇಲೆ ಯೇಸು – "ತಂದೆಯೇ, ನನ್ನ ಆತ್ಮವನ್ನು ನಿನ್ನ ಕೈಗೆ ಒಪ್ಪಿಸಿಕೊಡುತ್ತೇನೆ" ಎಂದು ಮಹಾಧ್ವನಿಯಿಂದ ಕೂಗಿದನು; ಇದನ್ನು ಹೇಳಿದ ಮೇಲೆ ಪ್ರಾಣ ಬಿಟ್ಟನು.

– ಲೂಕ 23:46

ಮಧ್ಯಾಹ್ನ ಹನ್ನೆರಡು ಘಂಟೆಯಿಂದ ಮೂರು ಘಂಟೆಯವರೆಗೆ ಆ ದೇಶದ ಮೇಲೆಲ್ಲಾ ಕತ್ತಲೆ ಕವಿಯಿತು. ಯೇಸು ತಿರಿಗಿ ಮಹಾಧ್ವನಿಯಿಂದ ಕೂಗಿ ಪ್ರಾಣಬಿಟ್ಟನು. ಆಗ ಇಗೋ ದೇವಾಲಯದ ತೆರೆಯು ಮೇಲಿಂದ ಕೆಳಗಿನವರೆಗೂ ಹರಿದು ಎರಡು ಭಾಗವಾಯಿತು; ಭೂಮಿಯು ಅದರಿತು; ಬಂಡೆಗಳು ಸೀಳಿ ಹೋದವು. ಶತಾಧಿಪತಿಯು ಮತ್ತು ಆತನ ಸಂಗಡ ಯೇಸುವನ್ನು ಕಾಯುತ್ತಿದ್ದವರು ಭೂಕಂಪವನ್ನೂ ನಡೆದ ಸಂಗತಿಗಳನ್ನೂ ನೋಡಿ ಬಹಳ ಹೆದರಿಕೊಂಡು–"ನಿಜವಾಗಿ ಈತನು ದೇವಕುಮಾರನಾಗಿದ್ದನು" ಅಂದರು.

**– ಮತ್ತಾಯ 27:45,50–51,54**

ಆದದರಿಂದ ಸಿಪಾಯಿಗಳು ಬಂದು ಮೊದಲನೆಯವನ ಕಾಲುಗಳನ್ನೂ ಅವನ ಜೊತೆಯಲ್ಲಿ ಶಿಲುಬೆಗೆ ಹಾಕಿಸಿಕೊಂಡಿದ್ದ ಮತ್ತೊಬ್ಬನ ಕಾಲುಗಳನ್ನೂ ಮುರಿದರು. ಆದರೆ ಯೇಸುವಿನ ಬಳಿಗೆ ಬಂದಾಗ ಆತನು ಆಗಲೇ ಸತ್ತಿರುವದನ್ನು ಅವರು ಕಂಡು ಆತನ ಕಾಲುಗಳನ್ನು ಮುರಿಯಲಿಲ್ಲ. ಆದರೂ ಸಿಪಾಯಿಗಳಲ್ಲಿ ಒಬ್ಬನು ಈಟಿಯಿಂದ ಆತನ ಪಕ್ಕೆಯನ್ನು ತಿವಿದನು; ತಿವಿದ ಕೂಡಲೆ ರಕ್ತವೂ ನೀರೂ ಹೊರಟಿತು.... ಯಾಕೆಂದರೆ, "ಆತನ ಒಂದು ಎಲುಬನ್ನಾದರೂ ಮುರಿಯಕೂಡದು" ಎಂದು ಶಾಸ್ತ್ರದಲ್ಲಿ ಬರೆದ ಮಾತು ನೆರವೇರುವಂತೆ ಇದಾಯಿತು; ಮತ್ತು – "ಅವರು ತಾವು ಇರಿದವನನ್ನು ದಿಟ್ಟಿಸಿ ನೋಡುವರು" ಎಂದು ಶಾಸ್ತ್ರದಲ್ಲಿ ಮತ್ತೊಂದು ಮಾತು ಹೇಳಿ ಅದೆ. **– ಯೋಹಾನ 19:32–37**

"ನೀವು... ಜೀವನಾಯಕನನ್ನು ಕೊಲ್ಲಿಸಿದಿರಿ. ಆದರೆ ದೇವರು ಆತನನ್ನು ಸತ್ತವರೊಳಗಿಂದ ಎಬ್ಬಿಸಿದನು; ಈ ವಿಷಯದಲ್ಲಿ ನಾವೇ ಸಾಕ್ಷಿಗಳು".

**– ಅಪೊ 3:14–15**

# ಯೇಸು ಹೂಣಲ್ಪಟ್ಟನು, ಆದರೆ ಮೂರನೇ ದಿನದಲ್ಲಿ ಎದ್ದನು

ಮಹಾಯಾಜಕರೂ ಫರಿಸಾಯರೂ ಪಿಲಾತನ ಬಳಿಗೆ ಕೂಡಿಬಂದು–"ದೊರೆಯೇ, ಆ ಮೋಸಗಾರನು ಬದುಕಿದ್ದಾಗ ತಾನು ಮೂರು ದಿನದ ಮೇಲೆ ಏಳುತ್ತೇನೆ ಅಂತ ಹೇಳಿದ್ದು ನಮ್ಮ ನೆನಪಿಗೆ ಬಂತು; ಆದಕಾರಣ ಮೂರನೆಯ ದಿನದ ತನಕ ಸಮಾಧಿಯನ್ನು ಭದ್ರ ಮಾಡಿ ಕಾಯುವದಕ್ಕೆ ಅಪ್ಪಣೆಕೊಡಬೇಕು; ಇಲ್ಲದಿದ್ದರೆ ಅವನ ಶಿಷ್ಯರು ಬಂದು ಅವನನ್ನು ಕದ್ದುಕೊಂಡು ಹೋಗಿ ಸತ್ತವನು ಬದುಕಿ ಬಂದಿದ್ದಾನೆ ಎಂದು ಹೇಳಾರು; ಆಗ ಮೊದಲನೆಯ ಮೋಸಕ್ಕಿಂತ ಕಡೆಯ ಮೋಸವು ಕೆಡುಕಾದೀತು" ಅಂದರು. ಪಿಲಾತನು ಅವರಿಗೆ–"ಕಾವಲುಗಾರರನ್ನು ತಕ್ಕೊಳ್ಳಿ; ಹೋಗಿ ನಿಮಗೆ ತಿಳಿದ ಹಾಗೆ ಭದ್ರಮಾಡಿ ಕಾಯಿರಿ" ಎಂದು ಹೇಳಲಾಗಿ ಅವರು ಹೊರಟು ಕಾವಲುಗಾರರೊಂದಿಗೆ ಆ ಕಲ್ಲಿಗೆ ಮುದ್ರೆ ಹಾಕಿ ಸಮಾಧಿಯನ್ನು ಭದ್ರಮಾಡಿದರು. – ಮತ್ತಾಯ 27:62b–66

ವಾರದ ಮೊದಲನೆಯ ದಿವಸ ಬೆಳಗಾಗುವಾಗ ಮಗ್ದಲದ ಮರಿಯಳು ಆ ಬೇರೆ ಮರಿಯಳೂ ಸಮಾಧಿಯನ್ನು ನೋಡುವುದಕ್ಕೆ ಬಂದರು. ಆಗ ಮಹಾ ಭೂಕಂಪವಾಯಿತು. ಕರ್ತನು ದೂತನು ಆಕಾಶದಿಂದ ಇಳಿದು ಬಂದು ಆ ಕಲ್ಲನ್ನು ಬಾಗಲಿನಿಂದ ಉರುಳಿಸಿ ಅದರ ಮೇಲೆ ಕೂತುಕೊಂಡನು. ಅವನ ಮುಖಭಾವವು ಮಿಂಚಿನಂತೆ ಇತ್ತು, ಅವನ ಉಡುಪು ಹಿಮದಂತೆ ಬೆಳ್ಳಗಿತ್ತು; ಕಾವಲುಗಾರರು ಅವನಿಗೆ ಹೆದರಿ ನಡುಗಿ ಸತ್ತವರ ಹಾಗಾದರು. ಆಗ ದೂತನು ಆ ಹೆಂಗಸರಿಗೆ–"ನೀವು ಹೆದರಬೇಡಿರಿ; ಶಿಲುಬೆಗೆ ಹಾಕಲ್ಪಟ್ಟಿದ್ದ ಯೇಸುವನ್ನು ಹುಡುಕುತ್ತೀರೆಂದು ಬಲ್ಲೆನು; ಆತನು ಇಲ್ಲಿ ಇಲ್ಲ; ತಾನು ಹೇಳಿದಂತೆ ಎದ್ದಿದ್ದಾನೆ.

– ಮತ್ತಾಯ 28:1–6a

ಶಾಸ್ತ್ರದ ಪ್ರಕಾರವೇ ಮೂರನೆಯ ದಿನದಲ್ಲಿ ಎಬ್ಬಿಸಲ್ಪಟ್ಟನು. –ಕೊರಿಂಥ 15:4b

"ನಾನು ತಿರಿಗಿ ಪಡಕೊಳ್ಳುತ್ತೇನೆಂದು ನನ್ನ ಪ್ರಾಣವನ್ನು ಕೊಡುತ್ತೇನೆ.... ನನ್ನ ಪ್ರಾಣವನ್ನು ಯಾರೂ ನನ್ನಿಂದ ತೆಗೆಯರು, ನನ್ನಷ್ಟಕ್ಕೆ ನಾನೇ ಅದನ್ನು ಕೊಡುತ್ತೇನೆ; ಅದನ್ನು ಕೊಡುವದಕ್ಕೆ ನನಗೆ ಅಧಿಕಾರ ಉಂಟು, ಅದನ್ನು ತಿರಿಗಿ ಪಡಕೊಳ್ಳುವದಕ್ಕೆ ನನಗೆ ಅಧಿಕಾರ ಉಂಟು..." –ಯೋಹಾನ 10:17b–18

ಮರಣವನ್ನು ಶಾಶ್ವತವಾಗಿ ನಿರ್ನಾಮ ಮಾಡುವನು; ಕರ್ತನಾದ ಯೆಹೋವನು ಎಲ್ಲರ ಮುಖದಲ್ಲಿನ ಕಣ್ಣೀರನ್ನು ಒರಸಿಬಿಡುವನು.

–ಯೆಶಾಯ 25:8a

"ಸತ್ತವನಾದೆನು, ಮತ್ತು ಇಗೋ ಯುಗಯುಗಾಂತರಗಳಲ್ಲಿಯೂ ಬದುಕುವವನಾಗಿದ್ದೇನೆ; ಮರಣದ ಮತ್ತು ಪಾತಾಳದ ಬೀಗದಕೈಗಳು ನನ್ನಲ್ಲಿ ಅವೆ". –ಪ್ರಕಟನೆ 1:18

"ಮರಣವೇ, ನಿನ್ನ ಜಯವೆಲ್ಲಿ? ಮರಣವೇ ನಿನ್ನ ವಿಷದ ಕೊಂಡಿ ಎಲ್ಲಿ? ಆದರೆ ದೇವರು ನಮ್ಮ ಕರ್ತನಾದ ಯೇಸುಕ್ರಿಸ್ತನ ಮೂಲಕ ನಮಗೆ ಜಯವನ್ನು ಕೊಟ್ಟಿದ್ದಾನೆ; ಆತನಿಗೆ ಸ್ತೋತ್ರ–ಕೊರಿಂಥ 15:55,57

"ಅದಕ್ಕೆ ಆಶ್ಚರ್ಯಪಡಬೇಡಿರಿ; ಸಮಾಧಿಗಳಲ್ಲಿರು ವವರೆಲ್ಲರು ಆತನ ಧ್ವನಿಯನ್ನು ಕೇಳಿ ಎದ್ದು ಹೊರಗೆ ಬರುವ ಕಾಲ ಬರುತ್ತದೆ. ಒಳ್ಳೇದನ್ನು ಮಾಡಿದವರಿಗೆ ಜೀವಕ್ಕಾಗಿ ಪುನರುತ್ಥಾನವಾಗುವದು; ಕೆಟ್ಟದ್ದನ್ನು ನಡಿಸಿದವರಿಗೆ ತೀರ್ಪಿಗಾಗಿ ಪುನರುತ್ಥಾನವಾಗುವದು".

–ಯೋಹಾನ 5:28–29

# ಯೇಸು ತನ್ನ ಪುನರುತ್ಥಾನದ ನಂತರ ಕಾಣಿಸಿಕೊಂಡನು

ವಾರದ ಮೊದಲನೆಯ ದಿನ ಬೆಳಿಗ್ಗೆ ಯೇಸು ಜೀವಿತ ನಾಗಿ ಎದ್ದ ಮೇಲೆ ಮಗ್ದಲದ ಮರಿಯಳಿಗೆ ಮೊದಲು ಕಾಣಿಸಿಕೊಂಡನು. ಆಕೆಗೆ ಏಳು ದೆವ್ವಗಳನ್ನು ಬಿಡಿಸಿದ್ದನು. ಇದಾದ ಮೇಲೆ ಶಿಷ್ಯರಲ್ಲಿ ಇಬ್ಬರು ಒಂದು ಹಳ್ಳಿಗೆ ನಡ ಕೊಂಡು ಹೋಗುತ್ತಿದ್ದಾಗ ಆತನು ಅವರಿಗೆ ರೂಪಾಂತರ ದಿಂದ ಕಾಣಿಸಿಕೊಂಡನು.

**–ಮಾರ್ಕ 16:9, 12**

ಅದೇ ದಿವಸದ ಅಂದರೆ ವಾರದ ಮೊದಲನೆಯ ದಿವಸದ ಸಂಜೆಯಲ್ಲಿ ಶಿಷ್ಯರು ಯೆಹೂದ್ಯರ ಭಯದಿಂದ ತಾವು ಇದ್ದ ಮನೆಯ ಬಾಗಲುಗಳನ್ನು ಮುಚ್ಚಿಕೊಂಡಿರಲು ಯೇಸು ಬಂದು ನಡುವೆ ನಿಂತು– "ನಿಮಗೆ ಸಮಾಧಾನ ವಾಗಲಿ" ಅಂದನು. ಇದನ್ನು ಹೇಳಿದ ಮೇಲೆ ಅವರಿಗೆ ತನ್ನ ಕೈಗಳನ್ನೂ ಪಕ್ಕೆಯನ್ನು ತೋರಿಸಿದನು. ಶಿಷ್ಯರು ಸ್ವಾಮಿಯನ್ನು ನೋಡಿದ್ದರಿಂದ ಸಂತೋಷಪಟ್ಟರು. **–ಯೋಹಾನ 20:19–20**

ಕೇಫನಿಗೂ ಆ ಮೇಲೆ ಹನ್ನೆರಡು ಮಂದಿ ಅಪೊಸ್ತಲರಿಗೂ ಕಾಣಿಸಿಕೊಂಡನು. ತರುವಾಯ ಒಂದೇ ಸಮಯದಲ್ಲಿ ಐನೂರು ಮಂದಿಗಿಂತ ಹೆಚ್ಚು ಸಹೋದರರಿಗೆ ಕಾಣಿಸಿಕೊಂಡನು... ತರುವಾಯ ಆತನು ಯಾಕೋಬನಿಗೂ ಆ ಮೇಲೆ ಅಪೊಸ್ತಲರೆಲ್ಲರಿಗೂ ಕಾಣಿಸಿಕೊಂಡನು.

**–1 ಕೊರಿಂಥ 15:5–7**

"ದೇವರು ಆತನನ್ನು ಮೂರನೆಯ ದಿನದಲ್ಲಿ ಎಬ್ಬಿಸಿ ಪ್ರತ್ಯಕ್ಷನಾಗುವಂತೆ ಮಾಡಿದನು; ಆತನು ಎಲ್ಲರಿಗೆ ಪ್ರತ್ಯಕ್ಷನಾಗದೆ ದೇವರು ಮುಂಚಿತವಾಗಿ ಆರಿಸಿಕೊಂಡಿದ್ದ ಸಾಕ್ಷಿಗಳಾದ ನಮಗೆ ಪ್ರತ್ಯಕ್ಷನಾದನು. ಆತನು ಸತ್ತವರೊಳಗಿಂದ ಜೀವಿತನಾಗಿ ಎದ್ದು ಬಂದ ಮೇಲೆ ನಾವು ಆತನ ಸಂಗಡ ಅನ್ನಪಾನಗಳನ್ನು ತಕ್ಕೊಂಡೆವು".

**–ಅಪೊ 10:41**

ಯೇಸು ಅವರಿಗೆ–"ನಿಮಗೆ ಸಮಾಧಾನವಾಗಲಿ" ಎಂದು ತಿರಿಗಿ ಹೇಳಿ–"ತಂದೆ ನನ್ನನ್ನು ಕಳುಹಿಸಿಕೊಟ್ಟ ಹಾಗೆಯೇ ನಾನೂ ನಿಮ್ಮನ್ನು ಕಳುಹಿಸಿಕೊಡುತ್ತೇನೆ" ಅಂದನು. ಇದನ್ನು ಹೇಳಿ ಅವರ ಮೇಲೆ ಊದಿ ಅವರಿಗೆ–ಪವಿತ್ರಾತ್ಮವರವನ್ನು ತಕ್ಕೊಳ್ಳಿರಿ".

– ಯೋಹಾನ 20:21–22

"ಪರಲೋಕದಲ್ಲಿಯೂ ಭೂಲೋಕದಲ್ಲಿಯೂ ಎಲ್ಲಾ ಅಧಿಕಾರವು ನನಗೆ ಕೊಡಲ್ಪಟ್ಟಿದೆ. ಆದ್ದರಿಂದ ನೀವು ಹೊರಟು ಹೋಗಿ ಎಲ್ಲಾ ದೇಶಗಳ ಜನರನ್ನು ಶಿಷ್ಯರನ್ನಾಗಿ ಮಾಡಿರಿ; ಅವರಿಗೆ ತಂದೆಯ, ಮಗನ, ಪವಿತ್ರಾತ್ಮನ ಹೆಸರಿನಲ್ಲಿ ದೀಕ್ಷಾಸ್ನಾನ ಮಾಡಿಸಿ ನಾನು ನಿಮಗೆ ಆಜ್ಞಾಪಿಸಿದ್ದನ್ನೆಲ್ಲಾ ಕಾಪಾಡಿಕೊಳ್ಳುವದಕ್ಕೆ ಅವರಿಗೆ ಉಪದೇಶ ಮಾಡಿರಿ. ನೋಡಿರಿ, ನಾನು ಯುಗದ ಸಮಾಪ್ತಿಯವರೆಗೂ ಎಲ್ಲಾ ದಿವಸ ನಿಮ್ಮ ಸಂಗಡ ಇರುತ್ತೇನೆ" ಎಂದು ಹೇಳಿದನು.

– ಮತ್ತಾಯ 28:18b–20

"ಆದರೆ ಪವಿತ್ರಾತ್ಮ ನಿಮ್ಮ ಮೇಲೆ ಬರಲು ನೀವು ಬಲವನ್ನು ಹೊಂದಿ ಯೆರೂಸಲೇಮಿನಲ್ಲಿಯೂ ಎಲ್ಲಾ ಯೂದಾಯ ಸಮಾರ್ಯ ಸೀಮೆಗಳಲ್ಲಿಯೂ ಭೂಲೋಕದ ಕಟ್ಟಕಡೆಯವರೆಗೂ ನನಗೆ ಸಾಕ್ಷಿಗಳಾಗಿರಬೇಕು" ಅಂದನು. ಈ ಮಾತುಗಳನ್ನು ಹೇಳಿದ ಬಳಿಕ ಅವರು ನೋಡುತ್ತಾ ಇದ್ದ ಹಾಗೆ ಆತನು ಏರಿಸಲ್ಪಟ್ಟನು; ಮೋಡವು ಆತನನ್ನು ಕವಿದುಕೊಂಡದ್ದರಿಂದ ಅವರ ಕಣ್ಣಿಗೆ ಮರೆಯಾದನು.

–ಅಪೊ 1:8–9

ಯೇಸುಸ್ವಾಮಿಯು ಅವರ ಕೂಡ ಮಾತಾಡಿದ ಮೇಲೆ ಆಕಾಶಕ್ಕೆ ಒಯ್ಯಲ್ಪಟ್ಟು ದೇವರ ಬಲಗಡೆಯಲ್ಲಿ ಆಸನಾರೂಢನಾದನು. ಇತ್ತಲಾಗಿ ಅವರು ಹೊರಟು ಹೋಗಿ ಎಲ್ಲೆಲ್ಲಿಯೂ ಸುವಾರ್ತೆಯನ್ನು ಸಾರಿದರು; ಮತ್ತು ಕರ್ತನು ಅವರ ಕೂಡ ಕೆಲಸ ಮಾಡುತ್ತಾ...

–ಮಾರ್ಕ 16:19–20a

# ಯೇಸು ವಾಗ್ದಾನ ಮಾಡಿದ ಹಾಗೆ ಪವಿತ್ರಾತ್ಮನು ಬಂದನು

"ಆಗ ನಾನು ತಂದೆಯನ್ನು ಕೇಳಿಕೊಳ್ಳುವೆನು; ಆತನು ನಿಮಗೆ ಬೇರೊಬ್ಬ ಸಹಾಯಕನನ್ನು ಸದಾಕಾಲ ನಿಮ್ಮ ಸಂಗಡ ಇರುವದಕ್ಕೆ ಕೊಡುವನು. ಆ ಸಹಾಯಕನು ಯಾರಂದರೆ ಸತ್ಯದ ಆತ್ಮನೇ. ಲೋಕವು ಆತನನ್ನು ನೋಡದೆಯೂ ತಿಳಿಯದೆಯೂ ಇರುವದರಿಂದ ಆತನನ್ನು ಹೊಂದಲಾರದು. ನೀವು ಆತನನ್ನು ಬಲ್ಲಿರಿ; ಹೇಗಂದರೆ ನಿಮ್ಮ ಬಳಿಯಲ್ಲಿ ವಾಸಮಾಡುತ್ತಾನೆ ಮತ್ತು ನಿಮ್ಮೊಳಗೆ ಇರುವನು. ನಾನು ನಿಮ್ಮನ್ನು ಅನಾಥರಾಗಿ ಬಿಡುವದಿಲ್ಲ; ನಿಮ್ಮ ಬಳಿಗೆ ಬರುತ್ತೇನೆ". –ಯೋಹಾನ 14:16–18

ಪಂಚಾಶತ್ತಮ ದಿನದ ಹಬ್ಬವು ಬಂದಿರಲಾಗಿ ಅವರೆಲ್ಲರು ಏಕಮನಸ್ಸಿನಿಂದ ಒಂದೇ ಸ್ಥಳದಲ್ಲಿ ಕೂಡಿದ್ದರು. ಆಗ ಬಿರುಗಾಳಿ ಬೀಸುತ್ತದೋ ಎಂಬಂತೆ ಪಕ್ಕನೆ ಆಕಾಶದೊಳಗಿಂದ ಒಂದು ಶಬ್ದವುಂಟಾಗಿ ಅವರು ಕೂತಿದ್ದ ಮನೆಯನ್ನೆಲ್ಲಾ ತುಂಬಿಕೊಂಡಿತು. ಅದಲ್ಲದೆ ಉರಿಯುಂತಿದ್ದ ನಾಲಿಗೆಗಳು ವಿಂಗಡಿಸಿಕೊಳ್ಳುವ ಹಾಗೆ ಅವರಿಗೆ ಕಾಣಿಸಿ ಅವರಲ್ಲಿ ಒಬ್ಬೊಬ್ಬರ ಮೇಲೆ ಒಂದೊಂದಾಗಿ ಕೂತುಕೊಂಡವು. ಆಗ ಅವರೆಲ್ಲರು ಪವಿತ್ರಾತ್ಮಭರಿತರಾಗಿ ಆ ಆತ್ಮ ತಮತಮಗೆ ನುಡಿಯುವ ಶಕ್ತಿಯನ್ನು ಕೊಡುವ ಪ್ರಕಾರ ಬೇರೆ ಬೇರೆ ಭಾಷೆಗಳಿಂದ ಮಾತಾಡುವದಕ್ಕೆ ಪ್ರಾರಂಭಿಸಿದರು. –ಅಪೊ 2:1–4

"ಈ ಯೇಸುವನ್ನೇ ದೇವರು ಎಬ್ಬಿಸಿದನು; ಇದಕ್ಕೆ ನಾವೆಲ್ಲರು ಸಾಕ್ಷಿಗಳಾಗಿದ್ದೇವೆ. ಆತನು ದೇವರ ಬಲಗೈಯಿಂದ ಉನ್ನತಸ್ಥಾನಕ್ಕೆ ಏರಿಸಲ್ಪಟ್ಟು ವಾಗ್ದಾನವಾಗಿದ್ದ ಪವಿತ್ರಾತ್ಮವರವನ್ನು ತಂದೆಯಿಂದ ಹೊಂದಿ ನೀವು ನೋಡಿ ಕೇಳುವದನ್ನು ಸುರಿಸಿದ್ದಾನೆ". –ಅಪೋ 2:32–33

“ನೀವು ನನ್ನಲ್ಲಿ ನೆಲೆಗೊಂಡಿರ್ರಿ, ನಾನೂ ನಿಮ್ಮಲ್ಲಿ ನೆಲೆ ಗೊಂಡಿರುವೆನು. ಕೊಂಬೆಯು ಬಳ್ಳಿಯಲ್ಲಿ ನೆಲೆ ಗೊಂಡಿರದಿದ್ದರೆ ಹೇಗೆ ತನ್ನಷ್ಟಕ್ಕೆ ತಾನೇ ಫಲಕೊಡಲಾರದೋ ಹಾಗೆಯೇ ನೀವು ನನ್ನಲ್ಲಿ ನೆಲೆಗೊಂಡಿರದಿದ್ದರೆ ಫಲ ಕೊಡಲಾರಿರಿ. ನಾನು ದ್ರಾಕ್ಷೇ ಬಳ್ಳಿ, ನೀವು ಕೊಂಬೆಗಳು; ಒಬ್ಬನು ನನ್ನಲ್ಲಿಯೂ ನಾನು ಅವನಲ್ಲಿಯೂ ನೆಲೆಗೊಂಡಿದ್ದರೆ ಅವನೇ ಬಹಳ ಫಲಕೊಡುವನು; ನೀವು ನನ್ನನ್ನು ಬಿಟ್ಟು ಏನೂ ಮಾಡಲಾರಿರಿ. –ಯೋಹಾನ 15:4–5

ಆತನ ಆಜ್ಞೆಗಳನ್ನು ಕೈಕೊಂಡು ನಡೆಯುವವನು ಆತನಲ್ಲಿ ನೆಲೆಗೊಂಡಿರುತ್ತಾನೆ, ಆತನು ಇವನಲ್ಲಿ ನೆಲೆಗೊಂಡಿರುತ್ತಾನೆ. ನಮ್ಮಲ್ಲಿ ನೆಲೆಗೊಂಡಿದ್ದಾನೆಂದು ಆತನು ನಮಗೆ ಅನುಗ್ರಹಿಸಿದ ಆತ್ಮನಿಂದಲೇ ಬಲ್ಲೆವು. –1 ಯೋಹಾನ 3:24

ಕ್ರಿಸ್ತನೊಂದಿಗೆ ಶಿಲುಬೆಗೆ ಹಾಕಿಸಿಕೊಂಡವನಾಗಿದ್ದೇನೆ; ಇನ್ನು ಜೀವಿಸುವವನು ನಾನಲ್ಲ, ಕ್ರಿಸ್ತನು ನನ್ನಲ್ಲಿ ಜೀವಿಸುತ್ತಾನೆ; ಈಗ ಶರೀರದಲ್ಲಿರುವ ನಾನು ಜೀವಿಸುವದು ಹೇಗೆಂದರೆ ದೇವಕುಮಾರನ ಮೇಲಣ ನಂಬಿಕೆಯಲ್ಲಿಯೇ. ಆತನು ನನ್ನನ್ನು ಪ್ರೀತಿಸಿ ನನಗೋಸ್ಕರ ತನ್ನನ್ನು ಒಪ್ಪಿಸಿಬಿಟ್ಟನು. –ಗಲಾತ್ಯ 2:20

ನೀವು ದೇವರಾತ್ಮನ ಮೂಲಕ ಆಂತರ್ಯದಲ್ಲಿ ವಿಶೇಷಬಲ ಹೊಂದಿದವರಾಗುವ ಹಾಗೆಯೂ ಕ್ರಿಸ್ತನು ನಿಮ್ಮ ನಂಬಿಕೆಯ ಮೂಲಕ ನಿಮ್ಮ ಹೃದಯಗಳಲ್ಲಿ ವಾಸಮಾಡುವ... –ಎಫೆಸ 3:16–17a

ಶರೀರಭಾವಾಧೀನರು ದೇವರಿಗೆ ಮೆಚ್ಚಿಕೆಯಾಗಿರ ಲಾರರು. ನೀವಾದರೋ ನಿಮ್ಮಲ್ಲಿ ದೇವರ ಆತ್ಮನು ವಾಸವಾಗಿ ರುವದಾದರೆ ಶರೀರ ಭಾವಾಧೀನರಲ್ಲ, ದೇವರಾತ್ಮನಿಗೆ ಅಧೀನರಾಗಿದ್ದೀರಿ. ಯಾವನಿಗಾದರೂ ಕ್ರಿಸ್ತನ ಆತ್ಮನು ಇಲ್ಲ ದಿದ್ದರೆ ಅವನು ಕ್ರಿಸ್ತನವನಲ್ಲ. –ರೋಮಾ 8:8–9

# ಯೇಸು ಪ್ರಭಾವ ಹೊಂದಿದನು

ಆದರೂ ದೇವದೂತರಿಗಿಂತ ಸ್ವಲ್ಪ ಕಡಿಮೆಯಾಗಿ ಮಾಡಲ್ಪಟ್ಟ ಒಬ್ಬಾತನು, ಅಂದರೆ ಯೇಸುವು, ಪ್ರಭಾವವನ್ನೂ ಮಾನವನ್ನೂ ಕಿರೀಟವಾಗಿ ಹೊಂದಿರುವದನ್ನು ನಾವು ನೋಡುತ್ತೇವೆ. ಮೃತಪಟ್ಟದ್ದರಿಂದಲೇ ಮಾನ ಪ್ರಭಾವಗಳನ್ನು ಹೊಂದಿದನು. –ಇಬ್ರಿಯ 2:9a

"ಈತನು ಪ್ರಿಯನಾಗಿರುವ ನನ್ನ ಮಗನು, ಈತನನ್ನು ಮೆಚ್ಚಿದ್ದೇನೆ" ಎಂಬಂಥ ವಾಣಿಯು ಸರ್ವೋತ್ಕೃಷ್ಟ ಪ್ರಭಾವ ದಿಂದ ಆತನಿಗೆ ಉಂಟಾದದ್ದರಲ್ಲಿ ಆತನು ತಂದೆಯಾದ ದೇವರಿಂದ ಘನಮಾನಗಳನ್ನು ಹೊಂದಿದನಲ್ಲವೇ. ನಾವು ಪರಿಶುದ್ಧ ಪರ್ವತದ ಮೇಲೆ ಆತನ ಸಂಗಡ ಇದ್ದಾಗ ಆಕಾಶದಿಂದ ಬಂದ ಆ ವಾಣಿಯನ್ನು ನಾವೇ ಕೇಳಿದೆವು.–2 ಪೇತ್ರ 1:17–18

ತಿರುಗಿದಾಗ ಏಳು ಚಿನ್ನದ ದೀಪಸ್ತಂಭಗಳನ್ನೂ ಆ ದೀಪಸ್ತಂಭಗಳ ಮಧ್ಯದಲ್ಲಿ ಮನುಷ್ಯಕುಮಾರನಂತೆ ಇರುವವನನ್ನೂ ಕಂಡೆನು. ಆತನು ನಿಲುವಂಗಿಯನ್ನು ತೊಟ್ಟು ಚಿನ್ನದ ಪಟ್ಟಿಯನ್ನು ಎದೆಗೆ ಕಟ್ಟಿಕೊಂಡಿದ್ದನು. ಆತನ ತಲೆಯ ಕೂದಲು ಬಿಳೀ ಉಣ್ಣೆಯಂತೆಯೂ ಹಿಮದಂತೆಯೂ ಬೆಳ್ಳಗಿತ್ತು. ಆತನ ಕಣ್ಣುಗಳು ಬೆಂಕಿಯ ಉರಿಯಂತೆಯೂ ಆತನ ಪಾದಗಳು ಕುಲುಮೆಯಲ್ಲಿ ಕಾಯಿಸಿದ ತಾಮ್ರದಂತೆಯೂ ಆತನ ಧ್ವನಿಯು ಜಲಪ್ರವಾಹದ ಘೋಷದಂತೆಯೂ ಇದ್ದವು. ಆತನ ಬಲಗೈಯಲ್ಲಿ ಏಳು ನಕ್ಷತ್ರಗಳಿದ್ದವು; ಆತನ ಬಾಯೊಳಗಿಂದ ಹದವಾದ ಇಬ್ಬಾಯಿ ಕತ್ತಿಯು ಹೊರಡುತ್ತಿತ್ತು. ಆತನ ಮುಖವು ಮಧ್ಯಾಹ್ನದಲ್ಲಿ ಪ್ರಕಾಶಿಸುವ ಸೂರ್ಯನಂತಿತ್ತು. ನಾನು ಆತನನ್ನು ಕಂಡಾಗ ಸತ್ತವನ ಹಾಗೆ ಆತನ ಪಾದಗಳ ಮುಂದೆ ಬಿದ್ದೆನು. ಆತನು ತನ್ನ ಬಲಗೈಯನ್ನು ನನ್ನ ಮೇಲಿಟ್ಟು– ಹೆದರಬೇಡ, ನಾನು ಮೊದಲನೆಯವನೂ ಕಡೆಯವನೂ ಸದಾ ಜೀವಿಸುವವನೂ ಆಗಿದ್ದೇನೆ.

–ಪ್ರಕಟನೆ 1:13–17

"ಮೊದಲು ನಿನಗಿದ್ದ ಪ್ರೀತಿಯನ್ನು ನೀನು ಬಿಟ್ಟು ಬಿಟ್ಟಿದ್ದೀಯೆಂದು ನಾನು ನಿನ್ನ ಮೇಲೆ ತಪ್ಪು ಹೊರಿಸ ಬೇಕಾಗುತ್ತದೆ. ಆದದರಿಂದ ನೀನು ಎಲ್ಲಿಂದ ಬಿದ್ದಿದ್ದೀಯೋ ಅದನ್ನು ನಿನ್ನ ನೆನಪಿಗೆ ತಂದುಕೊಂಡು ದೇವರ ಕಡೆಗೆ ತಿರುಗಿಕೋ".– ಪ್ರಕಟನೆ 2:4b–5a

"ನಿನಗೆ ಸಂಭವಿಸುವದಕ್ಕಿರುವ ಬಾಧೆಗಳಿಗೆ ಹೆದರಬೇಡ... ನೀನು ಸಾಯಬೇಕಾದರೂ ನಂಬಿಗಸ್ತನಾಗಿರು; ನಾನು ನಿನಗೆ ಜೀವವೆಂಬ ಜಯಮಾಲೆಯನ್ನು ಕೊಡುವೆನು". – ಪ್ರಕಟನೆ 2:10

"ಜಯಶಾಲಿಗೆ ಹೀಗೆ ಶುಭ್ರವಸ್ತ್ರಗಳನ್ನು ಹೊದಿಸು ವರು. ಜೀವಬಾಧ್ಯರ ಪಟ್ಟಿಯಿಂದ ಅವನ ಹೆಸರನ್ನು ನಾನು ಅಳಿಸಿಬಿಡದೆ ಅವನು ನನ್ನವನೆಂದು ನನ್ನ ತಂದೆಯ ಮುಂದೆಯೂ ಆತನ ದೂತರ ಮುಂದೆಯೂ ಒಪ್ಪುವೆನು". – ಪ್ರಕಟನೆ 3:5

"ನಿನಗಿರುವ ಶಕ್ತಿ ಕೊಂಚವಾಗಿದ್ದರೂ ನೀನು ನನಗೆ ಸೇರಿದವನಲ್ಲವೆಂದು ಹೇಳದೆ ನನ್ನ ವಾಕ್ಯವನ್ನು ಕಾಪಾಡಿದ್ದರಿಂದ ಇಗೋ, ನಿನ್ನೆದುರಿನಲ್ಲಿ ಒಂದು ಬಾಗಿಲನ್ನು ತೆರೆದಿಟ್ಟಿದ್ದೇನೆ; ಯಾರೂ ಅದನ್ನು ಮುಚ್ಚಲಾರರು". – ಪ್ರಕಟನೆ 3:8b

"ನೀನು ಬೆಚ್ಚಗೂ ಇಲ್ಲದೆ ತಣ್ಣಗೂ ಇಲ್ಲದೆ ಉಗುರು ಬೆಚ್ಚಗಿರುವದರಿಂದ ನಿನ್ನನ್ನು ನನ್ನ ಬಾಯೊಳಗಿಂದ ಕಾರುವೆನು". – ಪ್ರಕಟನೆ 3:16

"ನಾನು ಯಾರಾರನ್ನು ಪ್ರೀತಿಸುತ್ತೇನೋ ಅವರನ್ನು ಗದರಿಸುತ್ತೇನೆ ಮತ್ತು ಶಿಕ್ಷಿಸುತ್ತೇನೆ. ನಾನು ಜಯ ಹೊಂದಿ ನನ್ನ ತಂದೆಯೊಡನೆ ಸಿಂಹಾಸನದಲ್ಲಿ ಕೂತುಕೊಂಡೆನು; ಹಾಗೆಯೇ ಜಯಹೊಂದುವವನನ್ನು ನನ್ನೊಡನೆ ಸಿಂಹಾಸನದಲ್ಲಿ ಕೂತುಕೊಳ್ಳುವಂತೆ ಮಾಡುವೆನು". – ಪ್ರಕಟನೆ 3:19a,21

# ಯೇಸು ಇಂದು ಏನು ಮಾಡುತ್ತಿದ್ದಾನೆ.

"ಆದರೆ ಈ ಯಾಜಕನು ಪಾಪನಿವಾರಣೆಗೋಸ್ಕರ ನಿರಂತರವಾಗಿ ನಿಲ್ಲುವ ಒಂದೇ ಯಜ್ಞವನ್ನು ಸಮರ್ಪಿಸಿ ದೇವರ ಬಲಗಡೆಯಲ್ಲಿ ಕೂತುಕೊಂಡನು. –ಇಬ್ರಿಯ 10:12

ಆಕಾಶಮಂಡಲಗಳನ್ನು ದಾಟಿಹೋದ ದೇವ ಕುಮಾರನಾದ ಯೇಸುವೆಂಬ ಶ್ರೇಷ್ಠ ಮಹಾಯಾಜಕನು ನಮಗಿರುವದರಿಂದ ನಾವು ಮಾಡಿರುವ ಪ್ರತಿಜ್ಞೆಯನ್ನು ಬಿಡದೆ ಹಿಡಿಯೋಣ. ಯಾಕಂದರೆ ನಮಗಿರುವ ಮಹಾ ಯಾಜಕನು ನಮ್ಮ ನಿರ್ಬಲಾವಸ್ಥೆಯನ್ನು ಕುರಿತು ಅನುತಾಪ ವಿಲ್ಲದವನಲ್ಲ; ಆತನು ಸರ್ವ ವಿಷಯಗಳಲ್ಲಿ ನಮ್ಮ ಹಾಗೆ ಶೋಧನೆಗೆ ಗುರಿಯಾದನು, ಪಾಪ ಮಾತ್ರ ಮಾಡಲಿಲ್ಲ. ಆದದರಿಂದ ನಾವು ಕರುಣೆಯನ್ನು ಹೊಂದುವಂತೆಯೂ ಆತನ ದಯೆಯಿಂದ ಸಮಯೋಚಿತವಾದ ಸಹಾಯವು ನಮಗೆ ದೊರೆಯುವಂತೆಯೂ ಧೈರ್ಯದಿಂದ ಕೃಪಾಸನದ ಮುಂದೆ ಬರೋಣ. –ಇಬ್ರಿಯ 4:14–16

ಆತನಾದರೋ ಸದಾಕಾಲವಿರುವದರಿಂದ ಆತನ ಯಾಜಕತ್ವವು ಮತ್ತೊಬ್ಬರಿಗೆ ಹೋಗುವಂಥದಲ್ಲ. ಆದಕಾರಣ ಆತನು ತನ್ನ ಮೂಲಕ ದೇವರ ಬಳಿಗೆ ಬರುವವರನ್ನು ಸಂಪೂರ್ಣವಾಗಿ ರಕ್ಷಿಸುವದಕ್ಕೆ ಶಕ್ತನಾಗಿದ್ದಾನೆ; ಅವರಿಗೋಸ್ಕರ ವಿಜ್ಞಾಪನೆ ಮಾಡುವದಕ್ಕೆ ಯಾವಾಗಲೂ ಬದುಕುವವನಾಗಿದ್ದಾನೆ. –ಇಬ್ರಿಯ 7:24–25

ನಾನು ನಿನ್ನನ್ನು ಎಂದಿಗೂ ಕೈಬಿಡುವದಿಲ್ಲ, ಎಂದಿಗೂ ತೊರೆಯುವದಿಲ್ಲವೆಂದು ದೇವರು ತಾನೇ ಹೇಳಿದ್ದಾನೆ. ಆದದರಿಂದ–"ಕರ್ತನು ನನ್ನ ಸಹಾಯಕನು, ಭಯ ಪಡೆನು, ಮನುಷ್ಯನು ನನಗೆ ಏನು ಮಾಡಾನು?" ಎಂದು ನಾವು ಧೈರ್ಯವಾಗಿ ಹೇಳಬಲ್ಲೆವು. –ಇಬ್ರಿಯ 13:5b–6

ಯೇಸುಕ್ರಿಸ್ತನು ನಿನ್ನೆ ಇದ್ದ ಹಾಗೆ ಈ ಹೊತ್ತೂ ಇದ್ದಾನೆ, ನಿರಂತರವೂ ಹಾಗೆಯೇ ಇರುವನು. –ಇಬ್ರಿಯ 13:8

"ನಿಮ್ಮನ್ನು ಕರಕೊಂಡು ಹೋಗಿ ನನ್ನ ಬಳಿಗೆ ಸೇರಿಸಿಕೊಳ್ಳುವೆನು; ಯಾಕಂದರೆ ನಾನಿರುವ ಸ್ಥಳದಲ್ಲಿ ನೀವು ಸಹ ಇರಬೇಕು". –ಯೋಹಾನ 14:3b

ಕರ್ತನು ತಾನೇ ಆಜ್ಞಾಘೋಷದೊಡನೆಯೂ.... ಆಕಾಶದಿಂದ ಇಳಿದು ಬರುವನು; ಆಗ ಕ್ರಿಸ್ತನಲ್ಲಿ ಸತ್ತವರು ಮೊದಲು ಎದ್ದು ಬರುವರು. ಆಮೇಲೆ ಜೀವದಿಂದುಳಿ ದಿರುವ ನಾವು ಅಂತರಿಕ್ಷದಲ್ಲಿ ಕರ್ತನನ್ನು ಎದುರುಗೊಳ್ಳು ವದಕ್ಕಾಗಿ ಅವರ ಸಂಗಡಲೇ ಮೇಘವಾಹನರಾಗಿ ಫಕ್ಕನೆ ಒಯ್ಯಲ್ಪಡುವೆವು; ಹೀಗಾಗಿ ನಾವು ಸದಾಕಾಲವು ಕರ್ತನ ಜೊತೆಯಲ್ಲಿರುವೆವು.

–1 ಥೆಸಲೊನೀಕ 4:16–17

"ಹೇಗೆ ಮಿಂಚು ಮೂಡಣದಲ್ಲಿ ಹುಟ್ಟಿ ಪಡುವಣದ ವರೆಗೂ ಕಾಣಿಸುತ್ತದೋ ಹಾಗೆಯೇ ಮನುಷ್ಯಕುಮಾರನ ಪ್ರತ್ಯಕ್ಷತೆಯು ಇರುವದು. ಆಗ ಮನುಷ್ಯಕುಮಾರನನ್ನು ಸೂಚಿಸುವ ಗುರುತು ಆಕಾಶದಲ್ಲಿ ಕಾಣಬರುವದು. ಆಗ ಭೂಲೋಕದಲ್ಲಿರುವ ಎಲ್ಲಾ ಕುಲದವರು ಎದೆಬಡ ಕೊಳ್ಳುವರು, ಮತ್ತು ಮನುಷ್ಯಕುಮಾರನು ಬಲದಿಂದಲೂ ಬಹು ಮಹಿಮೆಯಿಂದಲೂ ಆಕಾಶದ ಮೇಘಗಳ ಮೇಲೆ ಬರುವದನ್ನು ಕಾಣುವರು ಮತ್ತು ಆತನು ತುತೂರಿಯ ಮಹಾಶಬ್ದದಿಂದ ತನ್ನ ದೂತರನ್ನು ಕಳುಹಿಸುವನು. ಅವರು ಆತನು ಆದುಕೊಂಡವರನ್ನು ಆಕಾಶದ ಒಂದು ಕಡೆಯಿಂದ ಮತ್ತೊಂದು ಕಡೆಯವರೆಗೆ ನಾಲ್ಕು ದಿಕ್ಕುಗಳಿಂದ ಒಟ್ಟು ಗೂಡಿಸುವರು". – ಮತ್ತಾಯ 24:27,30–31

"ಮನುಷ್ಯಕುಮಾರನು ತನ್ನ ತಂದೆಯ ಪ್ರಭಾವದೊಡನೆ ತನ್ನ ದೂತರ ಸಮೇತವಾಗಿ ಬರುವನು; ಆವಾಗ ಆತನು ಒಬ್ಬೊಬ್ಬನಿಗೆ ಅವನವನ ನಡತೆಗೆ ತಕ್ಕ ಫಲವನ್ನು ಕೊಡುವನು".

– ಮತ್ತಾಯ 16:27

"ಈಗಲಾದರೋ ಆತನು ನಾಲ್ಕು ದಿಕ್ಕಿನಲ್ಲಿರುವ ಮನುಷ್ಯರೆಲ್ಲರೂ ತನ್ನ ಕಡೆಗೆ ತಿರುಗಿಕೊಳ್ಳಬೇಕೆಂದು ಅಪ್ಪಣೆಕೊಡುತ್ತಾನೆ. ಯಾಕೆಂದರೆ ಆತನು ನಿಷ್ಕರ್ಷೆ ಮಾಡಿದ ಪುರುಷನ ಕೈಯಿಂದ ನೀತಿಗನುಸಾರವಾಗಿ ಭೂಲೋಕದ ನ್ಯಾಯವಿಚಾರಣೆ ಮಾಡುವದಕ್ಕೆ ಒಂದು ದಿವಸವನ್ನು ಗೊತ್ತುಮಾಡಿದ್ದಾನೆ. ಅವನನ್ನು ಸತ್ತವರೊಳಗಿಂದ ಎಬ್ಬಿಸಿದ್ದರಲ್ಲಿ ಇದನ್ನು ನಂಬುವದಕ್ಕೆ ಎಲ್ಲರಿಗೂ ಆಧಾರ ಕೊಟ್ಟಿದ್ದಾನೆ ಅಂದನು".

– ಅಪೊ 17:30b–31

"ಸ್ವಾಮೀ, ಸ್ವಾಮೀ, ನಿನ್ನ ಹೆಸರಿನ ಮೇಲೆ ನಾವು ಬೋಧನೆ ಹೇಳಲಿಲ್ಲವೇ? ನಿನ್ನ ಹೆಸರಿನ ಮೇಲೆ ದೆವ್ವಗಳನ್ನು ಬಿಡಿಸಲಿಲ್ಲವೇ? ನಿನ್ನ ಹೆಸರಿನ ಮೇಲೆ ಅನೇಕ ಮಹತ್ಕಾರ್ಯಗಳನ್ನು ಮಾಡಲಿಲ್ಲವೇ" ಎಂದು ಆ ದಿನದಲ್ಲಿ ಎಷ್ಟೋ ಜನರು ನನಗೆ ಹೇಳುವರು. ಆಗ ನಾನು ಅವರಿಗೆ–"ನಾನೆಂದೂ ನಿಮ್ಮ ಗುರುತು ಕಾಣೆನು; ಧರ್ಮವನ್ನು ಮೀರಿ ನಡೆಯುವವರೇ, ನನ್ನಿಂದ ತೊಲಗಿ ಹೋಗಿರಿ ಎಂದು ಎಲ್ಲರ ಮುಂದೆ ಹೇಳಿಬಿಡುವೆನು".

– ಮತ್ತಾಯ 7:22–23

ಆದರೂ ಕರ್ತನ ದಿನವು ಕಳ್ಳನು ಬರುವಂತೆ ಬರುತ್ತದೆ. ಆ ದಿನದಲ್ಲಿ ಆಕಾಶಮಂಡಲವು ಮಹಾಘೋಷದಿಂದ ಇಲ್ಲದೆ ಹೋಗುವದು, ಸೂರ್ಯ ಚಂದ್ರ ನಕ್ಷತ್ರಗಳು ಉರಿದು ಲಯವಾಗಿ ಹೋಗುವವು, ಭೂಮಿಯೂ ಅದರಲ್ಲಿರುವ ಕೆಲಸಗಳೂ ಸುಟ್ಟು ಹೋಗುವವು. ಇವೆಲ್ಲವುಗಳು ಹೀಗೆ ಲಯವಾಗಿ ಹೋಗುವದರಿಂದ ನೀವು ದೇವರ ದಿನದ ಪ್ರತ್ಯಕ್ಷತೆಯನ್ನು ಎದುರುನೋಡುತ್ತಾ ಹಾರೈಸುತ್ತಾ ಎಷ್ಟೋ ಪರಿಶುದ್ಧವಾದ ನಡವಳಿಕೆಯೂ ಭಕ್ತಿಯೂ ಉಳ್ಳವರಾಗಿರ ಬೇಕಲ್ಲಾ... ಆದರೆ ನಾವು ದೇವರ ವಾಗ್ದಾನವನ್ನು ನಂಬಿ ನೂತನಾಕಾಶಮಂಡಲವನ್ನೂ ನೂತನಭೂಮಂಡಲವನ್ನೂ ಎದುರುನೋಡುತ್ತಾ ಇದ್ದೇವೆ; ಅವುಗಳಲ್ಲಿ ನೀತಿಯು ವಾಸವಾಗಿರುವದು.

– 2ಪೇತ್ರ 3:10–13

ಈ ಕಾರಣದಿಂದ ದೇವರು ಆತನನ್ನು ಅತ್ಯುನ್ನತ ಸ್ಥಾನಕ್ಕೆ ಏರಿಸಿ ಎಲ್ಲಾ ಹೆಸರುಗಳಿಗಿಂತ ಶ್ರೇಷ್ಠವಾದ ಹೆಸರನ್ನು ಆತನಿಗೆ ದಯಪಾಲಿಸಿದ್ದಾನೆ. ಆದದರಿಂದ ಸ್ವರ್ಗ ಮರ್ತ್ಯ ಪಾತಾಳಗಳಲ್ಲಿರುವವರೆಲ್ಲರೂ ಯೇಸುವಿನ ಹೆಸರಿನಲ್ಲಿ ಅಡ್ಡಬಿದ್ದು ಯೇಸುಕ್ರಿಸ್ತನನ್ನು ಒಡೆಯನೆಂದು ಪ್ರತಿಜ್ಞೆಮಾಡಿ ತಂದೆಯಾದ ದೇವರಿಗೆ ಘನವನ್ನು ಸಲ್ಲಿಸುವರು. –ಫಿಲಿಪ್ಪಿ 2:9–11

"ನಾನು ಕಂಡ ರಾತ್ರಿಯ ಕನಸಿನಲ್ಲಿ ಇಗೋ, ಮನುಷ್ಯಕುಮಾರನಂತಿರುವವನು ಆಕಾಶದ ಮೇಘಗಳೊಂದಿಗೆ ಬಂದು ಆ ಮಹಾವೃದ್ಧನನ್ನು ಸಮೀಪಿಸಿದನು, ಅವನನ್ನು ಆತನ ಸನ್ನಿಧಿಗೆ ತಂದರು. ಸಕಲಜನಾಂಗಕುಲ ಭಾಷೆಗಳವರು ಅವನನ್ನು ಸೇವಿಸಲೆಂದು ಅವನಿಗೆ ದೊರೆತನವೂ ಘನತೆಯೂ ರಾಜ್ಯವೂ ಕೊಡೋಣವಾದವು; ಅವನ ಆಳ್ವಿಕೆಯು ಅಂತ್ಯವಿಲ್ಲದ್ದು, ಶಾಶ್ವತವಾದದ್ದು; ಅವನ ರಾಜ್ಯವು ಎಂದಿಗೂ ಅಳಿಯದು".

–ದಾನಿಯೇಲ 7:13–14

"ವಧಿತನಾದ ಕುರಿಯಾದಾತನು ಬಲ ಐಶ್ವರ್ಯ ಜ್ಞಾನ ಸಾಮರ್ಥ್ಯ ಮಾನ ಪ್ರಭಾವ ಸ್ತೋತ್ರಗಳನ್ನು ಹೊಂದುವದಕ್ಕೆ ಯೋಗ್ಯನು" ಎಂದು ಹೇಳಿದರು.

–ಪ್ರಕಟನೆ 5:12b

ಆಗ ಪರಲೋಕದಲ್ಲಿ ಮಹಾ ಶಬ್ದಗಳುಂಟಾಗಿ– "ಲೋಕದ ರಾಜ್ಯಾಧಿಕಾರವು ನಮ್ಮ ಕರ್ತನಿಗೂ ಆತನು ಅಭಿಷೇಕಿಸಿದವನಿಗೂ ಉಂಟಾಯಿತು; ಆತನು ಯುಗಯುಗಾಂತರಗಳಲ್ಲಿಯೂ ರಾಜ್ಯವನ್ನಾಳುವನು" ಎಂದು ಹೇಳಿದವು. –ಪ್ರಕಟನೆ 11:15b

"ಎಲ್ಲೈ ಕಷ್ಟಪಡುವವರೇ, ಹೊರೆಹೊತ್ತವರೇ, ನೀವೆಲ್ಲರೂ ನನ್ನ ಬಳಿಗೆ ಬನ್ನಿರಿ; ನಾನು ನಿಮಗೆ ವಿಶ್ರಾಂತಿ ಕೊಡುವೆನು. ನಾನು ಸಾತ್ವಿಕನೂ ದೀನಮನಸ್ಸುಳ್ಳವನೂ ಆಗಿರುವದರಿಂದ ನನ್ನ ನೊಗವನ್ನು ನಿಮ್ಮ ಮೇಲೆ ತೆಗೆದುಕೊಂಡು ನನ್ನಲ್ಲಿ ಕಲಿತುಕೊಳ್ಳಿರಿ; ಆಗ ನಿಮ್ಮ ಆತ್ಮಗಳಿಗೆ ವಿಶ್ರಾಂತಿ ಸಿಕ್ಕುವದು". –ಮತ್ತಾಯ 11:28–29

"ಇಗೋ, ಬಾಗಿಲಲ್ಲಿ ನಿಂತುಕೊಂಡು ತಟ್ಟುತ್ತಾ ಇದ್ದೇನೆ; ಯಾವನಾದರೂ ನನ್ನ ಶಬ್ದವನ್ನು ಕೇಳಿ ಬಾಗಿಲನ್ನು ತೆರೆದರೆ ನಾನು ಒಳಗೆ ಬಂದು ಅವನ ಸಂಗಡ ಊಟ ಮಾಡುವೆನು, ಅವನು ನನ್ನ ಸಂಗಡ ಊಟಮಾಡುವನು". –ಪ್ರಕಟನೆ 3:20

ಕರ್ತನು ತನ್ನ ವಾಗ್ದಾನವನ್ನು ನೆರವೇರಿಸುವದಕ್ಕೆ ತಡಮಾಡುತ್ತಾನೆಂಬದಾಗಿ ಕೆಲವರು ಅರ್ಥಮಾಡಿಕೊಳ್ಳುವ ಪ್ರಕಾರ ಆತನು ತಡಮಾಡುವವನಲ್ಲ. ಯಾವನಾದರೂ ನಾಶವಾಗುವದರಲ್ಲಿ ಆತನು ಇಷ್ಟಪಡದೆ ಎಲ್ಲರೂ ತನ್ನ ಕಡೆಗೆ ತಿರುಗಿಕೊಳ್ಳಬೇಕೆಂದು ಅಪೇಕ್ಷಿಸುವವನಾಗಿದ್ದು ನಿಮ್ಮ ವಿಷಯದಲ್ಲಿ ದೀರ್ಘಶಾಂತಿಯುಳ್ಳವನಾಗಿದ್ದಾನೆ. –2 ಪೇತ್ರ 3:9

"ತಂದೆಯು ನನಗೆ ಕೊಡುವಂಥವರೆಲ್ಲರು ನನ್ನ ಬಳಿಗೆ ಬರುವರು; ಮತ್ತು ನನ್ನ ಬಳಿಗೆ ಬರುವವನನ್ನು ನಾನು ತಳ್ಳಿಬಿಡುವದೇ ಇಲ್ಲ".

–ಯೋಹಾನ 6:37

"ಆದರೂ ಕರ್ತನ ನಾಮವನ್ನು ಹೇಳಿಕೊಳ್ಳುವವರೆಲ್ಲರಿಗೂ ರಕ್ಷಣೆಯಾಗುವದೆಂದು ದೇವರು ಹೇಳುತ್ತಾನೆ ಎಂಬದೇ". – ಅಪೊ 2:21

...ಇದೇ ಆ ರಕ್ಷಣೆಯ ದಿನ.

–2 ಕೊರಿಂಥ 6:2

ಬಾಯಾರಿದವನು ಬರಲಿ. ಇಷ್ಟವುಳ್ಳವನು ಜೀವಜಲವನ್ನು ಕ್ರಯವಿಲ್ಲದೆ ತೆಗೆದುಕೊಳ್ಳಲಿ.
–ಪ್ರಕಟನೆ 22:17b

# ಯೇಸುವಿನೊಂದಿಗೆ ನೀವು ಏನು ಮಾಡುವಿರಿ?

"ಆತನ ಮಗನನ್ನು ನಂಬುವವನಿಗೆ ನಿತ್ಯಜೀವ ಉಂಟು; ಮಗನಿಗೆ ಒಳಗಾಗದವನು ಜೀವವನ್ನು ಕಾಣುವದೇ ಇಲ್ಲ; ದೇವರ ಕೋಪವು ಅವರ ಮೇಲೆ ನೆಲೆಗೊಂಡಿರುವದು". –ಯೋಹಾನ 3:36

ಯಾರಾರು ಆತನನ್ನು ಅಂಗೀಕರಿಸಿದರೋ, ಅಂದರೆ ಆತನ ಹೆಸರಿನಲ್ಲಿ ನಂಬಿಕೆಯಿಟ್ಟರೋ, ಅವರಿಗೆ ದೇವರ ಮಕ್ಕಳಾಗುವ ಅಧಿಕಾರ ಕೊಟ್ಟನು. –ಯೋಹಾನ 1:12

ಆದಕಾರಣ ಎಲ್ಲಾ ನೀಚತನವನ್ನೂ ಎಲ್ಲಾ ದುಷ್ಟತನ ವನ್ನೂ ತೆಗೆದುಹಾಕಿ ಮನಸಿನೊಳಗೆ ಬೇರೂರಿರುವ ವಾಕ್ಯಕ್ಕೆ ನಮ್ರತೆಯಿಂದ ಎಡೆಗೊಡಿರಿ; ಅದು ನಿಮ್ಮ ಆತ್ಮಗಳನ್ನು ರಕ್ಷಿಸು ವದಕ್ಕೆ ಸಾಮರ್ಥ್ಯವುಳ್ಳದ್ದಾಗಿದೆ. –ಯಾಕೋಬ 1:21

ನೀನು ಯೇಸುವನ್ನೇ ಕರ್ತನೆಂದು ಬಾಯಿಂದ ಅರಿಕೆ ಮಾಡಿಕೊಂಡು ದೇವರು ಆತನನ್ನು ಸತ್ತವರೊಳಗಿಂದ ಎಬ್ಬಿಸಿದ ನೆಂದು ಹೃದಯದಿಂದ ನಂಬಿದರೆ ನಿನಗೆ ರಕ್ಷಣೆಯಾಗುವದು ಎಂಬದೇ. ಹೃದಯದಿಂದ ನಂಬುವದರ ಮೂಲಕ ನೀತಿಯು ದೊರಕುತ್ತದೆ, ಬಾಯಿಂದ ಅರಿಕೆಮಾಡುವದರ ಮೂಲಕ ರಕ್ಷಣೆಯಾಗುತ್ತದೆ.

–ರೋಮಾ 10:9b–10

## ಪ್ರಾರ್ಥನೆಯ ಮಾದರಿ

*ಪ್ರೀತಿಯ ಕರ್ತನಾದ ಯೇಸುವೇ,*

*ನನ್ನ ಪಾಪಗಳನ್ನು ತೆಗೆದುಹಾಕುವದಕ್ಕಾಗಿ ಶಿಲುಬೆಯಲ್ಲಿ ಪ್ರಾಣಕೊಟ್ಟದ್ದಕ್ಕೆ ಕೃತಜ್ಞತೆಗಳು. ನಾನು ಮಾಡಿರುವ ಎಲ್ಲಾ ಕೆಟ್ಟ ಕಾರ್ಯಗಳಿಗಾಗಿ ನಾನು ಪಶ್ಚಾತ್ತಾಪ ಪಡುತ್ತೇನೆ. ಈ ಕ್ಷಣದಲ್ಲೇ ನಾನು ನಿಮ್ಮನ್ನು ರಕ್ಷಕನಾಗಿಯೂ ಕರ್ತನಾಗಿಯೂ ನನ್ನ ಹೃದಯದಲ್ಲಿ ಸ್ವೀಕರಿಸುತ್ತೇನೆ. ನನ್ನನ್ನು ದೇವರ ಮಗುವಾಗಿ ಮಾಡುವ ನಿಮ್ಮ ವಾಗ್ದಾನವನ್ನು ನಾನು ನಂಬುತ್ತೇನೆ. ಪ್ರತಿದಿನ ನಿಮಗಾಗಿ ಜೀವಿಸಲು ಬಲ ನೀಡಬೇಕೆಂದು ನಿಮ್ಮಲ್ಲಿ ಆಶ್ರಯಿಸುತ್ತೇನೆ.*

*ನಿಮ್ಮ ನಾಮದಲ್ಲಿ ನಾನು ಪ್ರಾರ್ಥಿಸುತ್ತೇನೆ. ಆಮೇನ್.*

